# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 149 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 31–12–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 149 | RNI No: KARKAN/2023/88462 | KA/SK/CTA-874/2024-2026 | Chitradurga | Date: 31-12-2024 Tuesday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಮೂಢನಂಬಿಕೆಯಿಂದ ದೂರವಿರಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ; ಸ್ವಾಮೀಜಿ 2

ಜ.5, 6 ರಂದು ರಾಜ್ಯ ಮಟ್ಟದ ಯುವಜನೋತ್ಸವ 3

ಕರ್ನಾಟಕ ದಲಿತ ಚಳವಳಿ 50 ವರ್ಷಗಳು........ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಮಹಿಳಾ ಕಾಂಗ್ರೆಸ್ಸಿಗೆ ಅರ್ಪಿತಾ ನೇಮಕ

» ಚಿತ್ರದುರ್ಗ



ಕಾಂಗ್ರೆಸ್ ಯುವ, ವಿದ್ಯಾರ್ಥಿ ಘಟಕದಲ್ಲಿ ಒಂದು ದಶಕದ ಕಾಲ ಕಾರ್ಯಕರ್ತೆಯಾಗಿ ಪಕ್ಷ ಸಂಘಟನೆಯಲ್ಲಿ ಸಲ್ಲಿಸಿದ ಸೇವೆ ಗುರುತಿಸಿ ನಗರದ ನಿವಾಸಿ, ಎಂಎಸ್ಸಿ ಪದವೀಧರೆ ಎಂ.ಸಿ.ಅರ್ಪಿತಾ ಅವರನ್ನು ಮಹಿಳಾ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯನ್ನಾಗಿ ಜಿಲ್ಲಾಧ್ಯಕ್ಷೆ ಗೀತಾನಂದಿನಿಗೌಡನೇಮಕಮಾಡಿಆದೇಶಿಸಿದ್ದಾರೆ. ಮುಂಬರುವ ತಾಲೂಕು, ಜಿಲ್ಲಾ ಪಂಚಾಯಿತಿ ಸೇರಿ ಎಲ್ಲ ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಶ್ರಮಿಸಲು ಸಂಘಟನೆ ಕಾರ್ಯಕೈಗೊಳ್ಳುವಂತೆ ಆದೇಶ ಪತ್ರದಲ್ಲಿ ತಿಳಿಸಿದ್ದಾರೆ. ಅರ್ಪಿತಾ ಅವರ ಪಕ್ಷನಿಷ್ಠೆ ಹಾಗೂ ಯುವ, ವಿದ್ಯಾರ್ಥಿ ಕಾಂಗ್ರೆಸ್ ಘಟಕದಲ್ಲಿ ಸಂಘಟನಾ ಸಾಮರ್ಥ್ಯ ಪರಿಗಣಿಸಿ ಅವರಿಗೆ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಿಸುವಂತೆ ಮಾಜಿ ಸಚಿವ ಎಚ್.ಆಂಜನೇಯ, ಜಿಲ್ಲಾಧ್ಯಕ್ಷ ಎಂ.ಕೆ. ತಾಜ್‌ಪೀರ್ ಶಿಫಾರಸ್ಸು ಮಾಡಿದ್ದರು. ಈ ಹಿನ್ನೆಲೆಯಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ನೇಮಕಾತಿ ಮಾಡಿ ಆದೇಶಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರಿಯಾಂಕ್ ರಾಜೀನಾಮೆ ನೀಡುವ ಅಗತ್ಯ ಇಲ್ಲ

» ಚಿತ್ರದುರ್ಗ

ಪ್ರಿಯಾಂಕ್ ಖರ್ಗೆ ಸಚಿನ್ ಆತ್ಮಹತ್ಯೆಗೂ ಏನ್ ಸಂಬಂಧ? ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡುವ ಅಗತ್ಯ ಇಲ್ಲ ಎಂದು ಸಚಿವ ಕೆ ಜೆ ಜಾರ್ಜ್ ಸ್ಪಷ್ಟಪಡಿಸಿದರು. ಹೊಸದುರ್ಗ ತಾಲ್ಲೂಕಿನ ನೀರಗುಂದ ಗ್ರಾಮ ಬಳಿ ಸಚಿವ ಕೆ ಜೆ ಜಾರ್ಜ್ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಬಿಜೆಪಿ ಆಗ್ರಹ ವಿಚಾರ ಡಿ ಕೆ ರವಿ, ಗಣಪತಿ ಆತ್ಮಹತ್ಯೆ ಪ್ರಕರಣ ಬಗ್ಗೆ ಬಿಜೆಪಿ ಧರಣಿ ಮಾಡಿತ್ತು ವಿಧಾನಸೌಧದಲ್ಲಿ ಧರಣಿ ಕುಳಿತರು, ಮಲಗಿದರು ನಾನು ಗಣಪತಿ ಆತ್ಮಹತ್ಯೆ ಪ್ರಕರಣ ವಿಚಾರದಲ್ಲಿ ರಾಜೀನಾಮೆ ನೀಡಿದ್ದೆನು ಸಿಐಡಿ ಬಿ ರಿಪೋರ್ಟ್ ನೀಡಿತು, ಸಿಬಿಐ, ಸುಪ್ರೀಂಕೋರ್ಟ್ ನಲ್ಲಿ ಪ್ರಕರಣ ಏನಾಯ್ತು ಮತ್ತೆ ಯಾರಾದರೂ ಆ ಪ್ರಕರಣಗಳ ಬಗ್ಗೆ ಮಾತಾಡಿದರಾ? ಪ್ರಿಯಾಂಕ್ ಖರ್ಗೆ ಸಚಿನ್ ಆತ್ಮಹತ್ಯೆಗೂ ಏನ್ ಸಂಬಂಧ? ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡುವ ಅಗತ್ಯ ಇಲ್ಲಗಣಪತಿ ಆತ್ಮಹತ್ಯೆ ವಿಚಾರದಲ್ಲಿ ಬಿಜೆಪಿ ಹಗಲು ರಾತ್ರಿ ಧರಣಿ ನನಗೆ ಗೊತ್ತಿತ್ತು ಗಣಪತಿ ಪ್ರಕರಣ ನನಗೆ ಸಂಬಂಧವಿರಲಿಲ್ಲ ನಾನು ಅಂದು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆ ಎದುರಿಸಿದೆಬಿಜೆಪಿಯಿಂದ ಹಿಟ್ ಅಂಡ್ ರನ್, ಲಾಜಿಕ್ ಎಂಡ್ ಮಾಡಿದ್ದಾರಾ? ಬಿಜೆಪಿ ಆರೋಪಕ್ಕೆ ಯಾವುದೇ ಬೆಲೆ ಇಲ್ಲ ಎಂದರು. ಭ್ರಷ್ಟಾಚಾರ ಮಿತಿ ಮೀರಿದೆ ಎಂದು ಜಗದೀಶ್ ಶೆಟ್ಟರ್ ಆರೋಪ ವಿಚಾರ ಶೆಟ್ಟರ್ ಬಳಿ ದಾಖಲೆಯಿದ್ದರೆ ಕೊಡಲಿ, ತನಿಖೆ ಮಾಡಿಸುತ್ತೇವೆ ತಪ್ಪಿತಸ್ಥರ ವಿರುದ್ಧ ಸಿಎಂ, ಗೃಹ ಸಚಿವರು ಕ್ರಮ ಕೈಗೊಳ್ಳುತ್ತಾರೆ ಸಂವಿಧಾನ ಕೈಲಿಡಿದು ಓಡಾಡುವವರು ದೇಶದ್ರೋಹಿಗಳೆಂದು ಪ್ರಹ್ಲಾದ್ ಜೋಶಿ ಟೀಕೆ ವಿಚಾರ ಸಂವಿಧಾನದ ಆಧಾರದ ಮೇಲೆ ನಮ್ಮ ದೇಶ ನಡೆಯುತ್ತಿದೆ ಸಂವಿಧಾನ ಕೈಲಿಡಿದು ಓಡಾಡಬೇಡಿ ಎನ್ನುವವರು ವಿರೋಧಿಗಳು ಎಂದು ಸಚಿವ ಕೆ ಜೆ ಜಾರ್ಜ್ ತಿಳಿಸಿದರು.ಸೋಲಾರ್ ಪಾರ್ಕ್ ಪರಿಶೀಲನೆಗೆ ನಾನು ಬಂದಿದ್ದೇನೆ ಸಚಿವ ಸಂಪುಟ ಪುನರಚನೆ ಬಗ್ಗೆ ನಾನು ಹೇಳಲಾಗದು ಸಿಎಂ, ಕೆಪಿಸಿಸಿ ಅಧ್ಯಕ್ಷ, ಹೈಕಮಾಂಡ್ ತೀರ್ಮಾನಿಸಲಿದೆ ನಮ್ಮನ್ನೇನು ಕೇಳಿ ಸಂಪುಟ ಪುನರಚನೆ ಮಾಡಲ್ಲ ಎಂದು ಸಚಿವ ಜಾರ್ಜ್ ಸ್ಪಷ್ಟಪಡಿಸಿದರು.

### ಕಾಣೆ : ಪತ್ತೆಗೆ ಮನವಿ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಸೊಂಡೇಕೆರೆ ಗ್ರಾಮದ ಹುಚ್ಚಿಂಗಪ್ಪ ತಂದೆ ಹಾಲಪ್ಪ (ಸು.38ವರ್ಷ) ಎಂಬ ವ್ಯಕ್ತಿ ಕಾಣೆಯಾದ ಕುರಿತು 2024ರ ಜೂನ್ 26 ರಂದು ಹಾಗೂ ಚಿತ್ರದುರ್ಗ ಟೌನ್ ಮುನ್ಸಿಪಲ್ ಕಾಲೋನಿಯ ಬಸಮ್ಮ ಗಂಡ ಓಬಣ್ಣ (ಸು.85ವರ್ಷ) ವೃದ್ದೆ ಕಾಣೆಯಾದ ಕುರಿತು ನವೆಂಬರ್ 14 ರಂದು ಐಮಂಗಲ ಪೊಲೀಸ್ ಠಾಣೆಯಲ್ಲಿ ಎರಡು ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಈ ಮೇಲ್ಕಂಡ ವ್ಯಕ್ತಿಗಳ ಕುರಿತು ಮಾಹಿತಿ ಕಂಡುಬಂದಲ್ಲಿ ಚಿತ್ರದುರ್ಗ ಪೊಲೀಸ್ ಕಂಟ್ರೋಲ್ ರೂಂ ನಂ.9480803100,ಐಮಂಗಲ ಪೊಲೀಸ್ ಉಪನಿರೀಕ್ಷಕರ ದೂರವಾಣಿ ಸಂಖ್ಯೆ 9480803154 ಗೆ ಸಂಪರ್ಕಿಸಬಹುದು.

---

ಹೊಸದುರ್ಗ: ನೀರಗುಂದ ಗೇಟ್ ಹತ್ತಿರ ಸ್ಥಾಪಿತವಾಗಿರುವ ಸೋಲಾರ್ ಪಾರ್ಕ್‌ಗೆ ಇಂದನ ಸಚಿವ ಕೆ.ಜೆ.ಜಾರ್ಜ್ ಭೇಟಿ, ಪರಿಶೀಲನೆ

# ಕುಸುಮ್ ಯೋಜನೆ ರೈತರಿಗೆ ವರದಾನ

» ಚಿತ್ರದುರ್ಗ

ರೈತರ ಕೃಷಿ ಮತ್ತು ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಕೊರತೆ ನೀಗಿಸುವ ನಿಟ್ಟಿನಲ್ಲಿ ಕುಸುಮ್ ಯೋಜನೆ ರೈತರಿಗೆ ವರದಾನವಾಗಲಿದೆ ಎಂದು ಇಂದನ ಸಚಿವರಾದ ಕೆ.ಜೆ.ಜಾರ್ಜ್ ಹೇಳಿದರು.

ಹೊಸದುರ್ಗ ತಾಲ್ಲೂಕಿನ ನೀರಗುಂದ ಗೇಟ್ ಹತ್ತಿರ ಕುಸುಮ್–ಸಿ ಯೋಜನೆಯಡಿ ಸ್ಥಾಪಿತವಾಗಿರುವ "ಸೋಲಾರ್ ಪಾರ್ಕ್"ಗೆ ಭೇಟಿ ನೀಡಿ, ಪರಿಶೀಲನೆ ನಡೆಸಿ ಅವರು ಮಾತನಾಡಿದರು.



ರೈತರಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಕುಸುಮ್ ಬಿ ಮತ್ತು ಸಿ ಯೋಜನೆಗೆ ರಾಜ್ಯದಲ್ಲಿ ಈಗಾಗಲೇ ಚಾಲನೆ ನೀಡಲಾಗಿದ್ದು, ಈ ಯೋಜನೆಯಿಂದಾಗಿ ರೈತರಿಗೆ ತಮ್ಮ ಕೃಷಿ ಮತ್ತು ನೀರಾವರಿ ಪಂಪ್‌ಸೆಟ್‌ಗಳಿಗೆ ಹಗಲಿನಲ್ಲಿ 7 ಗಂಟೆಗಳ ಕಾಲ ನಿರಂತರ ಗುಣಮಟ್ಟದ ವಿದ್ಯುತ್ ದೊರೆಯಲಿದೆ ಎಂದು ಹೇಳಿದರು.

ಈಗಾಗಲೇ ರಾಜ್ಯಾದ್ಯಂತ 3 ಸಾವಿರ ಮೆಗಾ ವ್ಯಾಟ್ ವಿದ್ಯುತ್ ಉತ್ಪಾದನೆಗೆ ಸ್ಥಳ ಗುರುತಿಸಲಾಗಿದ್ದು, ಮುಖ್ಯಮಂತ್ರಿಗಳ ಸೂಚನೆಯಂತೆ ಒಂದು ತಿಂಗಳಲ್ಲಿ 500 ರಿಂದ 600 ಮೆಗಾ ವ್ಯಾಟ್ ಉತ್ಪಾದನೆ ಮಾಡುವ ನಿಟ್ಟಿನಲ್ಲಿ ಅಗತ್ಯ ತಯಾರಿಗಳು ನಡೆದಿವೆ. ವಿದ್ಯುತ್ ಉಪಕೇಂದ್ರಗಳು ಇರುವ ಸ್ಥಳಗಳ ಹತ್ತಿರ ಒಂದು ಮೆಗಾ ವ್ಯಾಟ್ ಉತ್ಪಾದನೆಗೆ ಕನಿಷ್ಟ ಸುಮಾರು 4 ಎಕರೆ ಜಮೀನು ಅಗತ್ಯವಾಗಿ ಬೇಕಾಗುತ್ತದೆ. ವಿದ್ಯುತ್ ಉಪಕೇಂದ್ರದ ಸಾಮರ್ಥ್ಯಕ್ಕೆ ಅನುಗುಣವಾಗಿ ಸೋಲಾರ್ ಪಾರ್ಕ್‌ಗಳಲ್ಲಿ ವಿದ್ಯುತ್ ಉತ್ಪಾದನೆ ಮಾಡಿ ಅಲ್ಲಿಯೇ ಪೂರೈಕೆ ಮಾಡಿ ಕೊಡಲಾಗುವುದು ಎಂದು ತಿಳಿಸಿದ ಅವರು, ಈಗಾಗಲೇ 1200 ಮೆಗಾ ವ್ಯಾಟ್ ಹಂಚಿಕೆಯಾಗಿದ್ದು, ಬಾಕಿ ಇರುವುದಕ್ಕೂ ಟೆಂಡರ್ ಕರೆಯಲಾಗಿದೆ ಎಂದು ಹೇಳಿದರು. ರೈತರ ಬೇಡಿಕೆಗೆ ಅನುಗುಣವಾಗಿ ವಿದ್ಯುತ್ ಪೂರೈಕೆ ಮಾಡಲಾಗುತ್ತಿದ್ದು, ಈ ಯೋಜನೆಯಡಿ ಖಾಸಗಿಯವರು ಬಂಡವಾಳ ಹೂಡಿಕೆ ಮಾಡುತ್ತಾರೆ. ಸರ್ಕಾರದಿಂದ ಲಭ್ಯವಿರುವೆಡೆ ಸರ್ಕಾರಿ ಭೂಮಿ ನೀಡಲಾಗುವುದು, ಅಲ್ಲದೆ ಸೋಲಾರ್ ಘಟಕಗಳಲ್ಲಿ ಉತ್ಪಾದಿಸುವ ವಿದ್ಯುತ್ ಅನ್ನು ಸರ್ಕಾರವೇ ಗರಿಷ್ಟ 3.17 ರೂ. ನಂತೆ ಖರೀದಿ ಮಾಡಲಾಗುವುದು. ಸರ್ಕಾರಿ ಜಮೀನಿನಲ್ಲಿ ಸೋಲಾರ್ ಪಾರ್ಕ್ ನಿರ್ಮಾಣಕ್ಕೆ ಪ್ರತಿ ಎಕರೆಗೆ ರೂ.25 ಸಾವಿರ ಹಣವನ್ನು ಖಾಸಗಿ ಏಜೆನ್ಸಿಯವರು ಪ್ರತಿ ವರ್ಷ ಪಾವತಿಸಬೇಕು, ಈ ಹಣವನ್ನು ಜಿಲ್ಲಾಧಿಕಾರಿಗಳ ಬಳಿ ಡಿಪಾಸಿಟ್ ಮಾಡಲಾಗುವುದು. ಆಯಾ ಕ್ಷೇತ್ರದ ಸ್ಥಳೀಯ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಆಯಾ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಶಾಲೆ, ಅಂಗನವಾಡಿ, ಆಸ್ಪತ್ರೆ ಅಭಿವೃದ್ಧಿಗೆ ಅನುದಾನ ಬಳಕೆ ಮಾಡಬಹುದಾಗಿದೆ. ಈ ಯೋಜನೆಯಿಂದ ರೈತರಿಗೆ ರಾತ್ರಿಯ ಜೊತೆಗೆ ಹಗಲಿನಲ್ಲಿಯೂ ಉತ್ತಮ ವಿದ್ಯುತ್ ದೊರೆಯಲಿದ್ದು, ನಿದ್ದೆಗೆಟ್ಟು ನೀರಿಗಾಗಿ ಪರಿತಪಿಸುವುದು ತಪ್ಪಲಿದೆ ಎಂದರು. ಅಕ್ರಮ–ಸಕ್ರಮ ಯೋಜನೆಯಡಿ ರಾಜ್ಯದಲ್ಲಿ ಸುಮಾರು 4.5 ಲಕ್ಷ ಕೃಷಿ ಪಂಪ್‌ಸೆಟ್‌ಗಳು ಇವೆ. ಈ ಪೈಕಿ ಈಗಾಗಲೆ 2.5 ಲಕ್ಷ ಪಂಪ್‌ಸೆಟ್‌ಗಳನ್ನು ಅಕ್ರಮ–ಸಕ್ರಮದಡಿ ವಿದ್ಯುತ್ ಸಂಪರ್ಕ ಕಲ್ಪಿಸಿಕೊಡಲಾಗಿದೆ, ಇನ್ನೂ 2 ಲಕ್ಷ ಪಂಪ್‌ಸೆಟ್‌ಗಳಿಗೆ ಸಂಪರ್ಕ ಒದಗಿಸಲು ಈಗಾಗಲೆ ಏಜೆನ್ಸಿ ಅವರನ್ನು ನಿಗದಿಪಡಿಸಿ ವಹಿಸಲಾಗಿದೆ. ಮುಂದಿನ ಒಂದೂವರೆ ವರ್ಷದೊಳಗೆ ಈ ಯೋಜನೆ ಸಂಪೂರ್ಣಗೊಳ್ಳುವ ವಿಶ್ವಾಸವಿದೆ ಎಂದರು.

ತೋಟದ ಮನೆಗಳಿಗೆ ಹಗಲು ಹೊತ್ತು 03 ಫೇಸ್ ಹಾಗೂ ರಾತ್ರಿ ವೇಳೆ ಸಿಂಗಲ್ ಫೇಸ್ ವಿದ್ಯುತ್ ಕೊಡಲು ಈಗಾಗಲೆ ನಿರ್ಣಯ ಮಾಡಲಾಗಿದ್ದು, ಎಲ್ಲ ಗ್ರಾಮಗಳಿಗೆ ನಿರಂತರ ಜ್ಯೋತಿ ಯಡಿ ವಿದ್ಯುತ್ ಪೂರೈಸಲು ಟೆಂಡರ್ ಪ್ರಕ್ರಿಯೆ ನಡೆದಿದ್ದು, ಶೀಘ್ರ ಕಾರ್ಯಾದೇಶ ನೀಡಲಾಗುವುದು ಎಂದರು. ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರು ರಾಜ್ಯದ ಜನರಿಗೆ ಸೋಲಾರ್ ಪ್ಲಾಂಟ್ ಪರಿಚಯಿಸಿ, ಸುಮಾರು 3 ಸಾವಿರ ಮೆಗಾ ವ್ಯಾಟ್‌ವಿದ್ಯುತ್‌ಉತ್ಪಾದನಗೆಅನುಮೋದನೆ ನೀಡಿದ್ದು, ಈಗಾಗಲೇ ಹಲವೆಡೆ ವಿದ್ಯುತ್ ಉತ್ಪಾದನೆಯಾಗುತ್ತಿದೆ. ರೈತರ ಬೇಡಿಕೆಗೆ ಅನುಗುಣವಾಗಿ ಹಗಲಿನಲ್ಲಿ ನಿರಂತರ 7 ಗಂಟೆಗಳ ಕಾಲ ವಿದ್ಯುತ್ ದೊರೆಯಲಿದೆ. ನೀರಗುಂದ ಸೋಲಾರ್ ಪ್ಲಾಂಟ್‌ನಿಂದ ಈಗಾಗಲೇ ಕಳೆದ ಮೂರು ದಿನಗಳಿಂದ ವಿದ್ಯುತ್ ಸರಬರಾಜು ಆಗುತ್ತಿದ್ದು, ಈ ಭಾಗದ ರೈತರು ಸಂತಸ ವ್ಯಕ್ತಪಡಿಸಿದ್ದು, ಕ್ಷೇತ್ರದ ಉಳಿದ ವಿದ್ಯುತ್ ಉಪಕೇಂದ್ರಗಳ ಬಳಿಯೂ ಸೋಲಾರ್ ಪ್ಲಾಂಟ್ ಸ್ಥಾಪಿಸಲು ಇಂಧನ ಸಚಿವರು ಒಪ್ಪಿದ್ದಾರೆ. ಹೊಸದುರ್ಗ ತಾಲ್ಲೂಕು ಪದೇ ಪದೇ ಬರಕ್ಕೆ ತುತ್ತಾಗುವ ಪ್ರದೇಶವಾಗಿದ್ದು, ಈ ಭಾಗದಲ್ಲಿ ಯಾವುದೇ ನದಿಯ ನೀರಿನ ಮೂಲ ಲಭ್ಯವಿಲ್ಲ, ಹೀಗಾಗಿ ರೈತರು ಅಂತರ್ಜಲವನ್ನೇ ಹೆಚ್ಚಾಗಿ ನೆಚ್ಚಿಕೊಂಡಿದ್ದಾರೆ. ಸುಮಾರು 70 ಸಾವಿರ ಪಂಪ್‌ಸೆಟ್‌ಗಳನ್ನು ಅಕ್ರಮ–ಸಕ್ರಮದಡಿ ಸಂಪರ್ಕ ಕಲ್ಪಿಸಿ, ಗುಣಮಟ್ಟದ ವಿದ್ಯುತ್ ನೀಡಬೇಕಿದೆ. ಇದರ ಜೊತೆಗೆ ಭದ್ರಾ ಮೇಲ್ದಂಡೆ ಯೋಜನೆಯಡಿ 1.35 ಲಕ್ಷ ಎಕರೆಗೆ ನೀರು ಒದಗಿಸಲಾಗುವುದು ಹಾಗೂ ಭದ್ರಾ ಜಲಾಶಯದಿಂದ 800 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರಿನ ಪೂರೈಕೆ ಯೋಜನೆ ಜಾರಿಯಾಗುತ್ತಿದ್ದು, ಇವೆಲ್ಲವಕ್ಕೂ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ಬಲಪಡಿಸುವ ಅಗತ್ಯವಿದೆ, ಇದಕ್ಕಾಗಿ ಕ್ಷೇತ್ರ ವ್ಯಾಪ್ತಿಯಲ್ಲಿ 04 ವಿದ್ಯುತ್ ಸಬ್ ಸ್ಟೇಷನ್ ಮಂಜೂರು ಮಾಡುವಂತೆ ಇಂಧನ ಸಚಿವರಿಗೆ ಮನವಿ ಮಾಡಿದರು. ಇದಕ್ಕೆ ಸ್ಪಂದಿಸಿದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು, ಭೂಮಿಯನ್ನು ಗುರುತಿಸಿಕೊಟ್ಟರೆ, ಆದ್ಯತೆ ಮೇರೆಗೆ ವಿದ್ಯುತ್ ಸ್ಟೇಷನ್‌ಗಳನ್ನು ಮಂಜೂರು ಮಾಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ,ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಪಂಕಜ್ ಕುಮಾರ್ ಪಾಂಡೆ, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಮಹಾಂತೇಶ್ ಬೀಳಗಿ, ಜಿಲ್ಲಾಧಿಕಾರಿ ಟಿ. ವೆಂಕಟೇಶ್, ಗ್ಯಾರಂಟಿ ಯೋಜನಗಳ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ಶಿವಣ್ಣ ಸೇರಿದಂತೆ ಇಂಧನ ಇಲಾಖೆಯ ಅಧಿಕಾರಿಗಳು, ರೈತರು ಇದ್ದರು.

---

## ಅಬಕಾರಿ ಇಲಾಖೆ ಕಾರ್ಯಾಚರಣೆ : 22400 ಮೌಲ್ಯದ ಮದ್ಯ ವಶ

» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಅಬಕಾರಿ ಇಲಾಖೆ ಅಧಿಕಾರಿಗಳು ನಿರಂತರ ಕಾರ್ಯಾಚರಣೆ ಹಾಗೂ ಪ್ರಕರಣ ದಾಖಲಿಸುವ ಮೂಲಕ ಅಕ್ರಮದ್ಯ ಮಾರಾಟವನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಯಶಸ್ವಿ ಹೆಜ್ಜೆ ಇಟ್ಟಿದ್ದಾರೆ. ಆದರೂ ಸಹ ಇಲಾಖೆಯ ಕಣ್ಣು ತಪ್ಪಿಸಿ ದ್ವಿಚಕ್ರವಾಹನದಲ್ಲಿ ಅಕ್ರಮ ಮದ್ಯ ಸಾಗಾಟ ಮಾಡುವ ಸಂದರ್ಭದಲ್ಲಿ ದಾಳಿ ನಡೆಸಿ ಪ್ರಕರಣ ದಾಖಲಿಸಲಾಗಿದೆ ಎಂದು ಅಬಕಾರಿ ನಿರೀಕ್ಷಕ ಸಿ.ನಾಗರಾಜು ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ತಾಲ್ಲೂಕಿನ ಚಿಕ್ಕ ಉಳ್ಳಾರ್ತಿ ಗ್ರಾಮದ ಬೋರಯ್ಯ(37) ಎಂಬ ವ್ಯಕ್ತಿ ತನ್ನಬೈಕ್‌ನಲ್ಲಿ ಹೈವಾರ್ಡ್ಸ್ ವಿಸ್ಕಿ ಹಾಗೂ ಇನ್ನಿತರ ಮದ್ಯವನ್ನು ವಾಹನದಲ್ಲಿ ಸಾಗಾಟ ಮಾಡುತ್ತಿದ್ದಾಗ ಮಾಹಿತಿ ಪಡೆದ ಅಬಕಾರಿ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ಆತನನ್ನು ವಾಹನ ಸಮೇತ ಸುಮಾರು 22400ರೂ ಮೌಲ್ಯದ ಮದ್ಯವನ್ನು ವಶಪಡಿಸಿಕೊಂಡಿರುತ್ತಾರೆ.

ಜಿಲ್ಲಾ ಅಬಕಾರಿ ಉಪಆಯುಕ್ತರ ಮಾರ್ಗದರ್ಶನದಲ್ಲಿ ಸಿಬ್ಬಂದಿಯಾದ ಉಪನಿರೀಕ್ಷಕ ಟಿ.ರಂಗಸ್ವಾಮಿ, ಡಿ.ಟಿ.ತಿಪ್ಪಯ್ಯ, ಸಿ.ದರ್ಶನ್‌ಕುಮಾರ್ ಮುಂತಾದವರು ದಾಳಿಯಲ್ಲಿ ಭಾಗವಹಿಸಿದ್ದರು.



## ಅಕ್ರಮ ಮರಳು ಸಾಗಾಟ ಮಾಡುತ್ತಿದ್ದ ಟಿಪ್ಪರ್‌ಲಾರಿ ವಶ: ಪ್ರಕರಣ ದಾಖಲು.

» ಚಳ್ಳಕೆರೆ

ನಗರದ ಬಳ್ಳಾರಿ ರಸ್ತೆಯ ಎಸ್.ಆರ್.ವೈಬ್ರಿಡ್ಜ್ ಬಳಿ ಅಕ್ರಮವಾಗಿ ಮರಳನ್ನುಸಾಗಾಟಮಾಡುತ್ತಿದ್ದಟಿಪ್ಪರ್‌ಲಾರಿಯನ್ನುವಶಪಡಿಸಿಕೊಂಡು ಪ್ರಕರಣ ದಾಖಲು ಮಾಡಲಾಗಿದೆ ಎಂದು ಪಿಎಸ್‌ಐ ಕೆ.ಸತೀಶ್‌ನಾಯ್ಕ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ಜಿಲ್ಲಾ ರಕ್ಷಣಾಧಿಕಾರಿ ರಂಜಿತ್‌ಕುಮಾರ್ ಬಂಡಾರೂ, ಉಪನಿರೀಕ್ಷಕ ಟಿ.ಬಿ.ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕ್ರುದ್ದೀನ್ ದೇಸಾಯಿ ಮಾರ್ಗದರ್ಶನದಲ್ಲಿ ಸಾರ್ವಜನಿಕ ಮಾಹಿತಿ ಮೇರೆಗೆ ಬಳ್ಳಾರಿ ರಸ್ತೆಯ ಎಸ್‌ಆರ್ ವೈಬ್ರಿಡ್ಜ್ ಬಳಿ ಚಲಿಸುತ್ತಿರುವ ಪರಿಶೀಲನೆ ನಡೆಸಿದಾಗ ಅಕ್ರಮ ಮರಳು ಇರುವುದು ಪತ್ತೆಯಾಗಿದ್ದು ಚಾಲಕ ಭರತ್ ಹಾಗೂ ಟಿಪ್ಪರ್ ಮಾಲೀಕರ ವಿರುದ್ದ ಪ್ರಕರಣ ದಾಖಲುಮಾಡಲಾಗಿರುತ್ತದೆ..

---

**ಪ್ರಮುಖ ಸುದ್ದಿ**

# ನಗರದಲ್ಲಿ ಸದ್ದು ಮಾಡುವ ಬೈಕ್‌ಗಳಿಗೆ ಕಡಿವಾಣ ಹಾಕಿ

» ಚಿತ್ರದುರ್ಗ

ನಗರದಲ್ಲಿ ಜೋರು ಸದ್ದು ಮಾಡುವ ಬೈಕ್‌ಗಳಿಗೆ ಕಡಿವಾಣ ಜೊತೆಗೆ ಗಾಂಜಾ ವ್ಯಸನಮುಕ್ತವನ್ನಾಗಿಸಲು ಕ್ರಮಕೈಗೊಳ್ಳುವಂತೆ ಒತ್ತಾಯಿಸಿ ಜಿಲ್ಲಾಡಳಿತ ಹಾಗೂ ಜಿಲ್ಲಾ ರಕ್ಷಣಾಧಿಕಾರಿಗಳಿಗೆ ಕರ್ನಾಟಕ ರಾಜ್ಯ ಮಾಹಿತಿ ಹಕ್ಕು ವೇದಿಕೆವತಿಯಿಂದ ಸೋಮವಾರ ಮನವಿಯನ್ನು ಸಲ್ಲಿಸಲಾಯಿತು.




ಇತ್ತೀಚೆಗೆ ಯುವಪೀಳಿಗೆ ಬೈಕ್‌ಗಳ ಸೈಲೆನ್ಸರ್ ತೆಗೆಸಿ ಹೆಚ್ಚು ಅದರಲ್ಲೂ ಕರ್ಕಶ ಶಬ್ಧ ಮಾಡಿಕೊಂಡು ಬೈಕ್ ಚಲಾಯಿಸುತ್ತಿದ್ದಾರೆ. ಕೆಲವರು ಹಾರನ್‌ಗಳನ್ನು ಕೂಡ ಕರ್ಕಶ ಶಬ್ಧ ಮಾಡಿಕೊಂಡಿದ್ದಾರೆ.ವ ಶಾಲಾ–ಕಾಲೇಜ್ ಸೇರಿ ಜನಸಂದಣಿ ಪ್ರದೇಶದಲ್ಲಿ ದಿಢೀರನೆ ಕರ್ಕಶ ಶಬ್ಧ ಮಾಡಿಕೊಂಡು ಸಾಗುವ ಬೈಕ್‌ಗಳು ಎದೆಯನ್ನೇ ಝಲ್ ಎನಿಸುತ್ತವೆ. ಇದಕ್ಕೆ ಕಡಿವಾಣ ಹಾಕಲು ಗ್ಯಾರೇಜ್ ಮೆಕಾನಿಕ್‌ಗಳ ಸಭೆ ಕರೆದು, ಇಂತಹ ವ್ಯವಸ್ಥೆ ಮಾಡಿಕೊಡದಂತೆ ಕಟ್ಟಪ್ಪಣೆ ಮಾಡಬೇಕು. ಜೊತೆಗೆ ಅಲ್ಲಲ್ಲಿ ಗಸ್ತು ಪೊಲೀಸರು ಇಂತಹ ಬೈಕ್‌ಗಳನ್ನು ವಶಕ್ಕೆ ಪಡೆದು, ಯುಪೀಳಿಗೆ ಬುದ್ಧಿ ಹೇಳಬೇಕು. ಜೊತೆಗೆ ಅವರ ಕುಟುಂಬದವರಿಗೆ ಮಾಹಿತಿ ನೀಡಬೇಕು. ಸಾಧ್ಯವಾದರೆ ಅಂತಹವರಿಗೆ ದಂಡದ ಜೊತೆಗೆ ಚಾಲನ ಪರವಾನಗಿ ರದ್ದುಗೊಳಿಸಲು ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಬಹಳಷ್ಟು ಮಂದಿ ಮಕ್ಕಳನ್ನು ಬೈಕ್‌ಲ್ಲಿ ಕೂರಿಸಿಕೊಂಡು ನಿಧಾನವಾಗಿ ಸಾಗುತ್ತಿದ್ದ ಸಂದರ್ಭದಲ್ಲಿ ದಿಢೀರನೆ ಇಂತಹ ಬೈಕ್ ಪಕ್ಕದಲ್ಲಿ ಕರ್ಕಶ ಶಬ್ಧ ಮಾಡಿಕೊಂಡು ಸಾಗುವುದು ಅವಘಡಕ್ಕೆ ಕಾರಣವಾಗುತ್ತದೆ. ಮಕ್ಕಳು ಭಯಭೀತಿಗೆ ಒಳಗಾಗುತ್ತಿದ್ದಾರೆ. ಇನ್ನೂ ವಯೋವೃದ್ಧರ ಪಾಡು ಹೇಳತೀರದು. ಇದರ ಜೊತೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಗಾಂಜಾ ವ್ಯಸನಿಗಳ ಸಂಖ್ಯೆ ಹೆಚ್ಚಾಗುತ್ತಿದೆ ಎಂಬ ಸುದ್ದಿ ಆತಂಕ ಹುಟ್ಟಿಸಿದೆ.

ಈಗಾಗಲೇ ಪೊಲೀಸ್ ಇಲಾಖೆ ಈ ಕುರಿತು ಜಾಗೃತಿ ಮೂಡಿಸುತ್ತಿದ್ದರೂ, ಕಳ್ಳ ಮಾರ್ಗದಲ್ಲಿ ಗಾಂಜಾ ಸೇವನೆ ನಡೆಯುತ್ತಿದೆ ಎಂಬ ಸುದ್ದಿ ಭಯ ಹುಟ್ಟಿಸುತ್ತಿದೆ. ಆದ್ದರಿಂದ ಗಾಂಜಾ ವ್ಯಸನಿಗಳನ್ನು ವಶಕ್ಕೆ ಪಡೆದು ಅವರಿಗೆ ಆಪ್ತಸಮಾಲೋಚನೆ ಜೊತೆಗೆ ಸಮಗ್ರ ತನಿಖೆ ಮಾಡಿದರೆ ಚೈನ್‌ಲಿಂಕ್ ಮಾದರಿ ದಂಧೆ ಬೆಳಕಿಗೆ ಬರಬಹುದು ಎಂದು ತಿಳಿಸಿದ್ದಾರೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಕರ್ಕಶ ಶಬ್ಧ ಮಾಡುವ ಬೈಕ್ ಹಾವಳಿಗೆ ಯುವಪೀಳಿಗೆ ಹೆಚ್ಚು ಆಕರ್ಷಣೆಗೊಂಡು ಸ್ವಯಂ ಸಂಕಷ್ಟಕ್ಕೆ ಸಿಲುಕುತ್ತಿದೆ. ಅನೇಕರು ಶಾಲಾ–ಕಾಲೇಜ್‌ಗಳಿಗೆ ಚಕ್ಕರ್ ಹೊಡೆದು ಇಂತಹ ರೈಡಿಂಗ್ ಮಾಡುತ್ತಿದ್ದಾರೆ. ಆದ್ದರಿಂದ ಯುವ ಪೀಳಿಗೆಯ ಹಿತದೃಷ್ಠಿಯಿಂದ ಹಾಗೂ ರಸ್ತೆಯಲ್ಲಿ ಸಮಾಧಾನವಾಗಿ ಸಾಗುವ ಸಾರ್ವಜನಿಕರ ಹಿತದೃಷ್ಟಿಯಿಂದ ಸದ್ದು ಮಾಡುವ ಬೈಕ್‌ಗಳ ಚಾಲನೆಗೆ ಕಡಿವಾಣ ಹಾಕಬೇಕು ಎಂದು ಜಿಲ್ಲಾಡಳಿತ ಹಾಗೂ ಜಿಲ್ಲಾ ರಕ್ಷಣಾಧಿಕಾರಿಗಳಲ್ಲಿ ವಿನಂತಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಮಾಹಿತಿ ಹಕ್ಕು ಬಳಕೆದಾರರಾದ ವೇದಮೂರ್ತಿ, ಎಂ.ಬೀಮಸಮುದ್ರ, ಜ್ಯೋತಿ ಲಕ್ಷ್ಮೀ, ವಿನೋದಮ್ಮ ಎಂ.ರಾಮಪ್ಪ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್



ಅಯೋಧ್ಯೆಯ ಪ್ರಭು ಶ್ರೀರಾಮ ಮಂದಿರ ಪ್ರತಿಷ್ಠಾಪಿಸಲಾದ ಒಂದು ವರ್ಷದ ಸವಿನೆನಪಿಗಾಗಿ ಹೊಸದುರ್ಗದ ಸುಮಂತ್ ಬನಸಿಹಳ್ಳಿ ಹಾಗೂ ಸೌಮ್ಯ ದಂಪತಿಯ ಮುದ್ದಿನ ಮಗಳು ಥಾಶ್ವಿಕ,ಜಿ ಎಸ್ ಸೀತಾಮಾತೆಯ ಉಡುಗೆಯಲ್ಲಿ ಹೀಗೆ ಕಾಣಿಸಿಕೊಂಡರು

## ಕೆ.ಜೈಮುನಿ ಇವರಿಗೆ ಯುವ ಶ್ರೀ ಕಲಾ ವಿಭೂಷಣ ಹಾಗೂ ಬೆಸ್ಟ್ ಯೋಗ ಟೀಚರ್ ಅವಾರ್ಡ್




» ಗೋವಾ

ಪತಂಜಲಿ ಕಾಲೇಜ್ ಆಫ್ ಯೋಗ ಅಂಡ್ ರಿಸರ್ಚ್ ಸೆಂಟರ್ ತಮಿಳುನಾಡು, ನ್ಯಾಷನಲ್ ಯೋಗ ಅಸೋಸಿಯೇಷನ್ ಆಫ್ ಇಂಡಿಯಾ ಇವರ ಸಂಯುಕ್ತ ಆಶ್ರಯದಲ್ಲಿ ಆಶ್ರಯದಲ್ಲಿ ನಡೆದ ಫಿಟ್ನೆಸ್ ಸ್ಟುಡಿಯೋ ಓಷನ್ ಪಾರ್ಕ್ ಗೋವಾ ಇಲ್ಲಿ ನಡೆದ ಆಲ್ ಇಂಡಿಯಾ ಯೋಗಾಸನ ಚಾಂಪಿಯನ್‌ಶಿಪ್ ಸಮಾರಂಭದಲ್ಲಿ ಕರ್ನಾಟಕದ ಅಂತರಾಷ್ಟ್ರೀಯ ಯೋಗಪಟು, ಮಾಸ್ ಗಿನ್ನಿಸ್ ಅವಾರ್ಡ್, ಗ್ಲೋಬಲ್ ಅವಾರ್ಡ್, ನೊಬೆಲ್ ವರ್ಲ್ಡ್ ರೆಕಾರ್ಡ್ ವಿಜೇತ, ಡಾಕ್ಟರೇಟ್ ಪುರಸ್ಕೃತರಾದ ಕೆ.ಜೈಮುನಿ ಇವರಿಗೆ ಯುವ 'ಶ್ರೀ ಕಲಾ ವಿಭೂಷಣ' ಹಾಗೂ 'ಬೆಸ್ಟ್ ಯೋಗ ಟೀಚರ್' ಅವಾರ್ಡ್ ಅನ್ನು ತಮಿಳುನಾಡಿನ ಪತಂಜಲಿ ಯೋಗ ಸಂಸ್ಥೆಯ ಗುರುಗಳಾದ ಕೆ. ರತ್ನ ಸಭಾಪತಿ ಇವರು ಪ್ರಶಸ್ತಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಡಾ. ಪರಶುರಾಮ್, ಕೆ.ಪಿ. ಸುರೇಶ್ ಕುಮಾರ್ , ಬ್ರಹ್ಮಾನಂದ ಗಾವ್ಡೇ, ಪಮ ಶರ್ಮ ಮುಂತಾದವರು ಉಪಸ್ಥಿತರಿದ್ದರು.

## ಅಪೂರ್ಣ ಅರ್ಜಿ ಪೂರ್ಣಗೊಳಿಸಲು ಜ.05 ರವರೆಗೆ ಅವಕಾಶ

» ಚಿತ್ರದುರ್ಗ

ಚಳ್ಳಕೆರೆ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ಅರ್ಜಿ ಪೂರ್ಣಗೊಳಿಸಲು 2025ರ ಜ.05 ರವರೆಗೆ ಕಾಲಾವಕಾಶ ಕಲ್ಪಿಸಲಾಗಿದೆ. ಚಳ್ಳಕೆರೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ವಿವಿಧ ಕಾರಣಗಳಿಂದ ಖಾಲಿಯಿರುವ 16 ಅಂಗನವಾಡಿ ಕಾರ್ಯಕರ್ತೆ ಹಾಗೂ 30 ಸಹಾಯಕಿಯರ ಗೌರವ ಸೇವೆಯ ಹುದ್ದೆಗಳಿಗೆ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿಗಳು ಸಲ್ಲಿಸುವಾಗ 4 ಹಂತಗಳ ಪ್ರಕ್ರಿಯೆ ಪೂರ್ಣಗೊಳ್ಳದ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಗೆ 288 ಹಾಗೂ ಸಹಾಯಕಿಯರ ಹುದ್ದೆಗೆ 118 ಅಪೂರ್ಣವಾದ ಅರ್ಜಿಗಳು ಸ್ವೀಕೃತವಾಗಿವೆ. ಅರ್ಜಿ ಸಲ್ಲಿಸುವ ನಾಲ್ಕು ಹಂತಗಳನ್ನು ಪೂರ್ಣಗೊಳಿಸದೇ ಅಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ 2025ರ ಜ.5ರ ಸಂಜೆ 5.30ರವರೆಗೆ ಅರ್ಜಿಗಳನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಚಳ್ಳಕೆರೆ ಶಿಶು ಅಭಿವೃದ್ಧಿಯೋಜನಾಧಿಕಾರಿ ಹರಿಪ್ರಸಾದ್ ತಿಳಿಸಿದ್ದಾರೆ.

## ಶಿಷ್ಯವೇತನಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ

» ಚಿತ್ರದುರ್ಗ

ಕೇಂದ್ರೀಯ ಸೈನಿಕ ಮಂಡಳಿಯ ಜಾಲತಾಣ ಔಓಐಙಓಇ.ಏಙಃ.ಉಔಗಿ.ಙಓ ನಲ್ಲಿ ಜೆ.ಓ.ಸಿ ರ್‍ಯಾಂಕ್‌ವರೆಗಿನ ಮಾಜಿ ಸೈನಿಕರ ಮಕ್ಕಳು, ದ್ವಿತೀಯ ಪಿಯುಸಿಯಲ್ಲಿ ಶೇ.60ಕ್ಕಿಂತ ಅಧಿಕ ಅಂಕಗಳನ್ನು ಪಡೆದು ವೃತ್ತಿಪರ ಶಿಕ್ಷಣದಲ್ಲಿ ಪದವಿ ವ್ಯಾಸಂಗಕ್ಕಾಗಿ 2024ನೇ ಸಾಲಿನಲ್ಲಿ ಪ್ರವೇಶಾತಿ ಪಡೆದವರು ಪ್ರಧಾನಮಂತ್ರಿ ಶಿಷ್ಯವೇತನ ಯೋಜನೆ ಎಂಬ ಶೀರ್ಷಿಕೆಯಡಿಯಲ್ಲಿ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜ.3ರವರೆಗೆ ಮತ್ತೊಮ್ಮೆ ಅವಕಾಶ ಕಲ್ಪಿಸಲಾಗಿದ್ದು, ಅರ್ಹ ಫಲಾನುಭವಿಗಳು ಸದುಪಯೋಗಪಡೆದುಕೊಳ್ಳಲು ತಿಳಿಸಿದೆ. ದೂರವಾಣಿ ಸಂಖ್ಯೆ 08182-220925 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

# ಮೂಢನಂಬಿಕೆಯಿಂದ ದೂರವಿರಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ; ಇಮ್ಮಡಿ ಸ್ವಾಮೀಜಿ

» ಚಿತ್ರದುರ್ಗ

ಗ್ರಾಮೀಣ ಪ್ರದೇಶದ ಜನರು ಕಂದಾಚಾರ ಮತ್ತು ಮೂಢನಂಬಿಕೆಯಿಂದ ದೂರವಿರಬೇಕಾದರೆ ಶಿಕ್ಷಣದಿಂದ ಮಾತ್ರ ಸಾಧ್ಯ ಎಂದು ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ತಿಳಿಸಿದರು.

ಭರಮಸಾಗರ ಸಮೀಪವಿರುವ ಬಸವನಶಿವನಕೆರೆ ಗ್ರಾಮದಲ್ಲಿ ಶಿವಯೋಗಿ ಸಿದ್ದರಾಮೇಶ್ವರರ ಕಂಚಿನ ಪ್ರತಿಮೆಯನ್ನು ಸೋಮವಾರ ಉದ್ಘಾಟಿಸಿ ಮಾತನಾಡಿದರು.

ಸಿದ್ದರಾಮೇಶ್ವರ ಸ್ವಾಮೀಜಿ ವಚನಗಳ ಅಭ್ಯಾಸದಿಂದ ವೈಜ್ಞಾನಿಕ ಪ್ರಜ್ಞಾವಂತರಾಗಿ, ಪ್ರಶ್ನಿಸುವ ಮನೋಭಾವದಿಂದ ಜ್ಞಾನ-ವಿಜ್ಞಾನ-ಸುಜ್ಞಾನವಂತರಾಗಿ. ಜೀವದಯ ಪರ ಮತ್ತು ಮೂಢನಂಬಿಕೆಗೆ ವಿರುದ್ಧವಾದ ಚಿಂತನೆಗಳನ್ನು ಸಿದ್ದರಾಮೇಶ್ವರರ ವಚನಗಳಲ್ಲಿ ಏಕಕಾಲಕ್ಕೆ ಕಾಣಬಹುದು. ಬೇರೆಯವರ ಮನಸ್ಸನ್ನು ನೋಯಿಸಿ ಹಿಂಸೆಯನ್ನುಂಟು ಮಾಡಿ ಸಂತೋಷ ಪಡುವುದು ವಿಘ್ನ ಸಂತೋಷಿಗಳ ಕುಕೃತ್ಯವಾಗಿದೆ. ಇಂತಹ ನಿರ್ಧಯಿಗಳು



ನೂರೆಂಟು ಪಾಪ ಕೃತ್ಯಗಳನ್ನು ಎಸಗಿದ ನಂತರ ಪ್ರಾಯಶ್ಚಿತಕ್ಕಾಗಿ ಕಾಶಿಗೆ ಹೋಗಿ ಗಂಗಾ ನದಿಯಲ್ಲಿ ಮುಳುಗಿ ವಿಶ್ವನಾಥನ ದರ್ಶನ ಪಡೆದರೆ ಪಾಪ ಪರಿಹಾರವಾಗುವುದೆ ಎಂದು ಸಿದ್ದರಾಮೇಶ್ವರರು ಪ್ರಶ್ನಿಸಿದ್ದಾರೆಂದು ಹೇಳಿದರು.

ಹುಣ್ಣಿಮೆ ದಿನ ಪೂರ್ಣಚಂದ್ರ ಗಂಗಾನದಿಯಲ್ಲಿ ಥಳಥಳನೆ ಹೊಳೆಯುತ್ತಿರುತ್ತಾನೆ. ಆದರೆ ಚಂದ್ರನ ಜೊತೆ ಆತನ ಕಲೆಗಳು ಎದ್ದು ಕಾಣುತ್ತಿರುತ್ತವೆ. ಧರ್ಮ, ನೀತಿ ತತ್ವಜ್ಞಾನ ಮುಂತಾದವು ಮಾನವರಿಗೆ ಸಂಸ್ಕಾರ ಕೊಟ್ಟು ನಿಜಮಾನವರನ್ನಾಗಿಸುವ ಗುರಿಯನ್ನೆ ಹೊಂದಿವೆ. ಆದರೆ ಧಾರ್ಮಿಕ ವಿಧಿ, ವಿಧಾನಗಳು ಸುಳ್ಳು ಜ್ಯೋತಿಷಿಗಳು ಭವಿಷ್ಯ ಹೇಳುವವರು ಪಾಪ ಪರಿಹಾರ ಮಾಡುತ್ತೇವೆಂದು ನಂಬಿಸಿ ಧರ್ಮದ ಹೆಸರಿನಲ್ಲಿ ಮೋಸ ಮಾಡುತ್ತಾರೆ. ಇದರಿಂದ ಅಪರಾಧಗಳು ಹೆಚ್ಚಾಗುತ್ತವೆ ಎಂದರು.

ಪಾಪಕ್ಕೆ ಪರಿಹಾರವಿದೆ ಎಂದ ಮೇಲೆ ಪಾಪ ಮಾಡುವುದಕ್ಕೆ ಜನರು ಹಿಂಜರಿಯುವುದಿಲ್ಲ. ವಿವಿಧ ಪಾಪ ಕಾರ್ಯಗಳಿಗೆ ತಕ್ಕಂತೆ ಪರಿಹಾರವನ್ನೂ ಹುಸಿ ಧರ್ಮ ಪಂಡಿತರು ಸೂಚಿಸುತ್ತಾರೆ. ನಿಜವಾದ ಧರ್ಮ ಜ್ಞಾನಿಗೆ ಈ ಅವನತಿ ಹೊಂದುತ್ತಿರುವ ವ್ಯವಸ್ಥೆಯಲ್ಲಿ ಸ್ಥಾನವೇ ಇಲ್ಲದಂತಾಗಿ ತನ್ನೊಳಗಿನ ಆತ್ಮಸಾಕ್ಷಿ ಹೊರಗಿನ ಜೀವ ಜಗತ್ತಿನ ಬಗೆಗಿನ ಭೂತ ದಯೆ, ಧರ್ಮ, ದರ್ಶನ, ನೀತಿ, ಮೌಲ್ಯ ಮತ್ತು ಸಂಸ್ಕಾರದ ಮೂಲಕ ಪರಮ ಪಾವನವಾಗಿ ಯಾರ ಮನಸ್ಸನ್ನು ನೋಯಿಸದೆ, ಹಿಂಸೆ ಕೊಡದೆ ಬದುಕುವವನೆ ನಿಜವಾದ ಮಾನವ ಎಂದು ತಿಳಿಸಿದರು.

ಜಿಲ್ಲಾ ಭೋವಿ ಸಂಘದ ಅಧ್ಯಕ್ಷ ಚಿಕ್ಕಂದವಾಡಿ ತಿಪ್ಪೇಸ್ವಾಮಿ, ಮಾಜಿ ಅಧ್ಯಕ್ಷ ಡಿ.ತಿಮ್ಮಣ್ಣ, ಕಾರ್ಯದರ್ಶಿ ಹೆಚ್.ಲಕ್ಷ್ಮಣ್, ಬಸವನಶಿವನಕೆರೆ ಗ್ರಾಮ ಪಂಚಾಯಿತಿ ಸದಸ್ಯರಾದ ಚಂದ್ರಪ್ಪ, ದೇವೇಂದ್ರಪ್ಪ ಆರ್. ಕೆ.ಬಸವರಾಜಪ್ಪ ಬ್ಯಾಲಹಾಳ್, ಈಶ್ವರಪ್ಪ ಬೇಡರಶಿವನಕೆರೆ, ತಿಪ್ಪೇಸ್ವಾಮಿ, ಯಲ್ಲಪ್ಪ ಹಾಗೂ ಬೇಡರ ಶಿವನಕೆರೆ ಬಸವನಶಿವನಕೆರೆ ಗ್ರಾಮಸ್ಥರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಚಿತ್ರದುರ್ಗದ ಕಲ್ಲಿನಕೋಟೆ ರಕ್ಷಿಸಿದ ಮದಕರಿನಾಯಕರು ಎಲ್ಲರಿಗೂ ಆದರ್ಶಪ್ರಾಯರು: ಎನ್.ಮಹೇಶ್

» ಚಳ್ಳಕೆರೆ

ಗಂಡುಮೆಟ್ಟಿನ ನಾಡು ಚಿತ್ರದುರ್ಗದ ವೀರಮದರಿನಾಯಕರ ಶೌರ್ಯ ಹಾಗೂ ಸಾಹಸ ಕಾರ್ಯವನ್ನು ಇತಿಹಾಸ ಎಂದಿಗೂ ಮರೆಯಲಾರದು.

ಚಿತ್ರದುರ್ಗದ ಏಳುಸುತ್ತಿನ ಕೋಟೆಯನ್ನು ರಕ್ಷಣೆ ಮಾಡುವ ಜೊತೆಗೆ ಉತ್ತಮ ಆಡಳಿತ ನೀಡಿದ ವೀರಮದಕರಿನಾಯಕರು ನಮ್ಮೆಲ್ಲರಿಗೂ ಸದಾಸ್ಪೂರ್ತಿ ಎಂದು ಬಿಜೆಪಿಯ ಹಿರಿಯ ನಾಯಕ, ಮಾಜಿ ಸಚಿವ ಎನ್.ಮಹೇಶ್ ತಿಳಿಸಿದರು.

ಅವರು, ಸೋಮವಾರ ಕಾಟಪ್ಪನಹಟ್ಟಿಯಲ್ಲಿ ಚಿತ್ರದುರ್ಗದ ಪಾಳೇಗಾರರ ವಂಶಸ್ಥರನ್ನು ಸನ್ಮಾನಿಸಿ ಅಭಿನಂದಿಸಿ ಮಾತನಾಡಿದರು. ಕಾರ್ಯಕ್ರಮವೊಂದಕ್ಕೆ ಆಗಮಿಸಿದ ಮಾಜಿ ಸಚಿವ ದಿವಂಗತ ತಿಪ್ಪೇಸ್ವಾಮಿಯವರ ಕೊಡುಗೆ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರು. ಮದಕರಿನಾಯಕ ವಂಶಸ್ಥರಾದ ವೆಂಕಟೇಶ್‌ನಾಯಕ, ಪ್ರಸನ್ನಮದಕರಿನಾಯಕ, ನಾರಾಯಣಸ್ವಾಮಿನಾಯಕ, ಡಾ.ರಾಮರಾ



ಜುನಾಯಕ, ಪರಶುರಾಮನಾಯಕ, ಪ್ರಜ್ವಲ್‌ನಾಯಕ ರವರನ್ನು ಸನ್ಮಾನಿಸಲಾಯಿತು.

ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರವೇದಿಕೆ ಅಧ್ಯಕ್ಷ ಎಸ್.ಅರುಣ್‌ಕುಮಾರ್, ವಾಗ್ಮಿ ವಾದಿರಾಜ್, ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಕೆ.ಟಿ.ಕುಮಾರಸ್ವಾಮಿ, ಅನಿಲ್‌ಕುಮಾರ್, ಪ್ರಶಾಂತ್‌ನಾಯಕ, ಜಿ.ಕೆ.ತಿಪ್ಪೇಶ್, ಈಶ್ವರನಾಯಕ, ಕಾಟಮಲಿಂಗಯ್ಯ, ಬಿಜೆಪಿ ಮಂಡಲಾಧ್ಯಕ್ಷ ಸೂರನಹಳ್ಳಿಶ್ರೀನಿವಾಸ್, ಕೆ.ವಿ.ಶ್ರೀನಿವಾಸ್‌ಮೂರ್ತಿ, ಟಿ.ತಿಮ್ಮಪ್ಪ ಮುಂತಾದವರು ಉಪಸ್ಥಿತರಿದ್ದರು.

## ಆರು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ

**ಚಿತ್ರದುರ್ಗ:** ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಗೆ ಹಾಜರಾದ 110 ವಿದ್ಯಾರ್ಥಿಗಳಲ್ಲಿ ಆರು ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದು, ಪ್ರಥಮ ದರ್ಜೆಯಲ್ಲಿ ನಲವತ್ತು, ದ್ವಿತೀಯ ದರ್ಜೆಯಲ್ಲಿ 46 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದು. ಎಂಟು ವಿದ್ಯಾರ್ಥಿಗಳು ಉತ್ತೀರ್ಣರಾಗಿ ಶೇ.90 ರಷ್ಟು ಫಲಿತಾಂಶ ಬಂದಿರುವುದಕ್ಕೆ ಉಪ ಪ್ರಾಂಶುಪಾಲರು ಚಿತ್ರಕಲಾ ಶಿಕ್ಷಕರು, ಶಿಕ್ಷಕ ವೃಂದದವರು ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ಹರಿಹರ ನಗರಸಭೆ; ಅಂಗನವಾಡಿ, ರುದ್ರಭೂಮಿಗೆ ಮಂಜೂರಾತಿ ನೀಡಿ, ಗೊಂದಲದಲ್ಲಿ ಮುಗಿದ ಸಭೆ

**ಹರಿಹರ:** ಅಂಗನವಾಡಿ ಕೇಂದ್ರ,ಕನ್ನಡ ಭವನ,ರುದ್ರಭೂಮಿಗಳಿಗೆ ಭೂ ಮಂಜೂರಾತಿ ನೀಡುವ ಮೂಲಕ ಪ್ರತಿಬಾರಿಯಂತೆ ಈ ಬಾರಿಯೂ ಗೊಂದಲದಲ್ಲಿಯೇ ನಗರಸಭೆಯ ಸಾಮಾನ್ಯ ಸಭೆ ಮುಕ್ತಾಯವಾಯಿತು.ನಗರದ ನಗರಸಭಾ ಕೌನ್ಸಿಲ್ ಸಭಾಂಗಣದಲ್ಲಿ ಗುರುವಾರ ನಡೆದ ನಗರಸಭೆಯ ಸಾಮಾನ್ಯ ಸಭೆಯಲ್ಲಿ ಗೊಂದಲ,ಗದ್ದಲ, ದೂರುಗಳ ಸುರಿಮಳೆ ಮತ್ತು ಅಧ್ಯಕ್ಷರು, ಪೌರಾಯುಕ್ತರ ಪರಸ್ಪರ ಹೊಂದಾಣಿಕೆ ಇಲ್ಲದೆ ಅಭಿವೃದ್ಧಿ ಕುಂಠಿತವಾದ ವಿಚಾರದೊಂದಿಗೆ ಆರಂಭವಾದ ಸಭೆ ಕೊನೆಯ ತನಕವೂ ಗದ್ದಲದಲ್ಲಿಯೇ ಮುಂದುವರಿದು ಮುಕ್ತಾಯವಾಯಿತು.ಸಭೆಯ ಆರಂಭದಲ್ಲಿಯೇ ಮಾತನಾಡಲು ಆರಂಭಿಸಿದ ಹಿರಿಯ ಸದಸ್ಯ ಶಂಕರ್ ಖಟಾವ್ಕರ್ ರವರು ನಗರಸಭೆಯ ಹಲವು ಅನುದಾನಗಳಲ್ಲಿ 2022-23,2023-24 ಮತ್ತು 2024-25 ಸಾಲಿನ ಸುಮಾರು 150 ಕ್ಕೂ ಹೆಚ್ಚು ಕಡತಗಳು ಪೆಂಡಿಂಗ್ ನಲ್ಲಿವೆ. ಇನ್ನೂ ವಿಶೇಷ ಅನುದಾನದ ಬಗ್ಗೆ ಏನನ್ನೂ ಮಾತನಾಡದಂತೆ ಆಗಿದೆ. 31 ಜನ ಸದಸ್ಯರು ತಮ್ಮ ವಾರ್ಡುಗಳಲ್ಲಿ ಒಂದು ಪುಟ್ಟಿ ಮಣ್ಣು ಹಾಕಲಿಕ್ಕೂ ಸಹ ಆಗುತ್ತಿಲ್ಲ ಎನ್ನುವುದು ವಿಷಾದದ ಸಂಗತಿಯಾಗಿದೆ. ಆದರೆ ಅಧ್ಯಕ್ಷರು ಹಾಗೂ ಪೌರಾಯುಕ್ತರು ನಾನು ಮೇಲು ನೀನು ಮೇಲು ಎಂದು ಊರಿನ ಅಭಿವೃದ್ಧಿಯ ಬಗ್ಗೆ ಕಿಂಚಿತ್ತು ಗಮನಹರಿಸದೆ ನಗರ ಹಾಳಾಗುತ್ತಿದೆ ನಮ್ಮೆಲ್ಲರ ಅವಧಿ ಇನ್ನು ಒಂದು ವರ್ಷ ಮಾತ್ರ ಇದ್ದು, ಇವರ ಅವಧಿ ಮುಗಿದ ಮೇಲೆ ಮಾಡೋಣವೆಂಬ ಬಗ್ಗೆ ಅಧಿಕಾರಿಗಳ ಕೈವಾಡವೇನಾದರೂ ಇದೆಯೇ..? ಎಂದು ಸಭೆಯಲ್ಲಿ ಪ್ರಶ್ನಿಸಿದರು.ಇದೆಲ್ಲಕ್ಕೂ ಉತ್ತರಿಸಿದ ಪೌರಾಯುಕ್ತ ಪಿ.ಸುಬ್ರಹ್ಮಣ್ಯ ಶ್ರೇಷ್ಠಿ ಮಾತನಾಡಿ ನಾನು ಅಧ್ಯಕ್ಷರು ಹಾಗು ಉಪಾಧ್ಯಕ್ಷರು ಹೊಂದಾಣಿಕೆಯಿಂದ ಇದ್ದು ಈ ಹಿಂದಿನದೆಲ್ಲವನ್ನು ಮರೆತಿದ್ದೇವೆ.ಈಗಾಗಲೇ ಹಲವು ವಿಚಾರಗಳ ಬಗ್ಗೆ ಚರ್ಚೆಯನ್ನು ಸಹ ಮಾಡಿರುತ್ತೇವೆ ನಾನು ಕರ್ತವ್ಯಕ್ಕೆ ಹಾಜರಾದಾಗ ಇಂಜಿನಿಯರ್ ಗಳ ಕೊರತೆ ಇತ್ತು ಈಗ 15 ದಿನಗಳ ಹಿಂದೆ ಹೊಸ ಇಂಜಿನಿಯರ್ ಬಂದಿರುತ್ತಾರೆ. ಅವರು ಸಹ ನಮ್ಮೊಂದಿಗೆ ಹೆಚ್ಚಿನ ರೀತಿಯಲ್ಲಿ ಕೈಜೋಡಿಸುತ್ತಿದ್ದಾರೆ ಮುಂಬರುವ ದಿನಗಳಲ್ಲಿ ಎಲ್ಲವೂ ಸರಿಯಾಗಲಿದೆ ಎಂದು ತಿಳಿಸಿದರು.

**ಪ್ರಮುಖ ಸುದ್ದಿ**

# ಕಾಂಗ್ರೆಸ್, ನೆಹರೂ ಕುಟುಂಬ ನಿರಂತರ ಅವಮಾನದಿಂದ ನೊಂದ ಅಂಬೇಡ್ಕರ್ ಸಾವನಪ್ಪಬೇಕಾಯಿತು: ಸಂಸದ

» ಚಳ್ಳಕೆರೆ

ರಾಷ್ಟ್ರದ ಇತಿಹಾಸದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರವರನ್ನು ಅವಮಾನಿಸಿದ ಏಕೈಕ ಪಕ್ಷವೆಂದರೆ ಅದು ಕಾಂಗ್ರೆಸ್ ಮಾತ್ರ. ಇಂದಿಗೂ ಸಹ ಕಾಂಗ್ರೆಸ್ ಪಕ್ಷದ ಅಗ್ರನಾಯಕರೂ ಸೇರಿದಂತೆ ಯಾರಿಗೂ ದಲಿತ ಸಮೂಹದ ಮೇಲೆ ಯಾವುದೇ ಗೌರವವಿಲ್ಲ. ಡಾ.ಅಂಬೇಡ್ಕರ್ ಅಷ್ಟೇಯಾಕೆ ಹಸಿರುಕ್ರಾಂತಿ ಹರಿಕಾರ ಬಾಬುಜಗಜೀವನರಾಮ್, ಹಿಂದುಳಿದ ವರ್ಗಗಳ ಅಗ್ರಗಣ್ಯನಾಯಕ ದೇವರಾಜಅರಸುರವರನ್ನು ಸಹ ಕಾಂಗ್ರೆಸ್ ಪಕ್ಷ ಅವಮಾನಿಸಿತ್ತು ಎಂದು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಸದ, ಮಾಜಿ ಉಪಮುಖ್ಯಮಂತ್ರಿ ಗೋವಿಂದ ಎಂ.ಕಾರಜೋಳ ತಿಳಿಸಿದರು.

ಅವರು, ಸೋಮವಾರ ಛೇಂಬರ್ ಆಫ್ ಕಾರ್ಮಸ್ ಸಭಾಂಗಣದಲ್ಲಿ ಸಾಮಾಜಿಕ ನ್ಯಾಯಕ್ಕಾಗಿ ನಾಗರಿಕರು ವೇದಿಕೆಯಡಿ ಹಮ್ಮಿಕೊಂಡಿದ್ದ ಸಂವಿಧಾನ ಸನ್ಮಾನ ಅಭಿಯಾನ ಸಂವಾದಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿಶೇಷವಾಗಿ ಸಮಾಜದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜಾಗೃತಿಗಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ದೇಶದ ಸ್ವಾತಂತ್ರ್ಯ ಇತಿಹಾಸವನ್ನು ಅವಲೋಕಿಸಿದಾಗ ಸ್ವಾತಂತ್ರ್ಯಪೂರ್ವದಲ್ಲಿದ್ದ ಕಾಂಗ್ರೆಸಿಗೂ, ಇಂದಿನ ಕಾಂಗ್ರೆಸ್‌ಗೂ ಅಜಗಜಾಂತರ ವ್ಯತ್ಯಸವಿವೆ. ದೆಹಲಿಯಲ್ಲಿ ನಡೆದ ಲೋಕಸಭಾ ಚುನಾವಣೆಯೂ ಸೇರಿದಂತೆ ಒಟ್ಟು ಮೂರು ಚುನಾವಣೆಗಳಲ್ಲಿ ಡಾ.ಬಿ.ಆರ್.ಅಂಬೇಡ್ಕರವರನ್ನು ಸ್ವಂತ




ಪಕ್ಷದವರೇ ಸೋಲಿಸಿದ್ದರು. ಅಂದಿನ ಪ್ರಧಾನಮಂತ್ರಿ ಜವಹರಲಾಲ್ ರಾಜಕೀಯ ಕುತಂತ್ರಕ್ಕೆ ಅಂಬೇಡ್ಕರ್ ಬಲಿಯಾಗಬೇಕಾಯಿತು. ಅಂಬೇಡ್ಕರ್ ದೆಹಲಿಯಲ್ಲಿ ಮೃತಪಟ್ಟಿದ್ದು ಬಾಡಿಗೆ ವಿಮಾನದಲ್ಲಿ ಅವರ ದೇಹವನ್ನು ಮಹರಾಷ್ಟ್ರಕ್ಕೆ ತರಲಾಯಿತು. ಪ್ರಧಾನಮಂತ್ರಿಯಾಗಿದ್ದನೆಹರೂಸಹನೆರವು ಒದಗಿಸಲಿಲ್ಲ. ಮಾಜಿಪ್ರಧಾನಮಂತ್ರಿಯಾದ ನೆಹರು, ಇಂದಿರಾಗಾಂಧಿ, ರಾಜೀವಗಾಂಧಿಯವರಿಗೆ ಸುಮಾರು 40 ಎಕರೆ ಪ್ರದೇಶದಲ್ಲಿ ಸ್ಮಾರಕ ನಿರ್ಮಾಣಮಾಡಲಾಗಿದೆ. ಆದರೆ, ಕಾಂಗ್ರೆಸ್ ಅಂದು ಅಂಬೇಡ್ಕರ್‌ರವರ ಅಂತ್ಯಸಂಸ್ಕಾರಕ್ಕೆ ಜಾಗವನ್ನು ನೀಡಲಿಲ್ಲ. ಅಂಬೇಡ್ಕರ್‌ರವರನ್ನು ಹೀನಾಯವಾಗಿ ನಡೆಸಿಕೊಂಡ ಕಾಂಗ್ರೆಸ್ ನಡೆಯ ಬಗ್ಗೆ ಪರಿಶಿಷ್ಟಜಾತಿ, ವರ್ಗದ ಸಮೂಹ ಚಿಂತನೆ ನಡೆಸಬೇಕು ಎಂದರು.

ಮಾಜಿ ಸಚಿವ, ಅಂಬೇಡ್ಕರ್‌ರವರ ಬಗ್ಗೆ ಸಾಕಷ್ಟು ವಿಚಾರ ಹಂಚಿಕೊಂಡ ಎನ್.ಮಹೇಶ್, ಲೋಕಸಭೆಯ ಕಾರ್ಯಕಲಾಪದಲ್ಲಿ ಗೃಹಸಚಿವ ಅಮಿತ್‌ಶಾ ಸುಧೀರ್ಘಕಾಲ ಕಾಂಗ್ರೆಸ್ ಪಕ್ಷ ಅಂಬೇಡ್ಕರವರನ್ನು ಯಾವ,ಯಾವ ರೀತಿ ಅನುಮಾಸಿ ಅವರಿಗೆ ರಾಜಕೀಯವಾಗಿ ಹಿನ್ನಡೆ ಅನುಭವಿಸುವಂತೆ ಮಾಡಿದ ಬಗ್ಗೆ ಮಾಹಿತಿ ನೀಡಿದರು. ಅಂಬೇಡ್ಕರ್‌ಗೆ ಮಾಡಿದ ಅವಮಾನ ಬಗ್ಗೆ ಸಾಕಷ್ಟು ವಿಚಾರಗಳನ್ನು ಹಂಚಿಕೊಂಡರು ಆದರೆ, ಲೋಕಸಭೆಕಾರ್ಯಕಲಾಯದಲ್ಲಿಮಾಡಿದ ವಿಚಾರವನ್ನು ಕಾಂಗ್ರೆಸ್ ಪಕ್ಷ ಇಡೀ ರಾಷ್ಟ್ರದಾದ್ಯಂತ ಚಳುವಳಿಯ ಮೂಲಕ ಪ್ರತಿಭಟನೆಯನ್ನು ವ್ಯಕ್ತಪಡಿಸಿದೆ. ಕಾಂಗ್ರೆಸ್ ಪಕ್ಷಕ್ಕೆ ಹಿಂದಿನ ಇತಿಹಾಸವನ್ನು ತಿಳಿಯುವ ಸೌಜನ್ಯವಿಲ್ಲ. ಅಂಬೇಡ್ಕರ್‌ರವರು ಹೆಚ್ಚು ನೊಂದುಕೊಂಡಿದ್ದರೆ ಅದಕ್ಕೆ ಮೂಲಕಾರಣ ಕಾಂಗ್ರೆಸ್ ಪಕ್ಷವೆಂದರು.

ಕರ್ನಾಟಕ ಸಾಮಾಜಿಕ ನ್ಯಾಯಪರ ವಕೀಲರವೇದಿಕೆ ಅಧ್ಯಕ್ಷ ಎಸ್. ಅರುಣ್‌ಕುಮಾರ್ ಮಾತನಾಡಿ, ರಾಷ್ಟ್ರದ ಸರ್ವತೋಮುಖ ಅಭಿವೃದ್ಧಿಗೆ ಡಾ.ಬಿ.ಆರ್.ಅಂಬೇಡ್ಕರ್ ರಚಿಸಿದ ಸನ್ಮಾನ ದಿಕ್ಸೂಚಿಯಾಗಿದೆ. ಇಡೀ ವಿಶ್ವವೇ ಅಂಬೇಡ್ಕರ್‌ರವರ ಜ್ಞಾನಭಂಡಾರ ವಿಚಾರಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುವ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ನೇತಾರರು ಅವರನ್ನು ನಿರಂತರ ಅವಮಾನಿಸುವ ಕಾರ್ಯವನ್ನು ಮಾಡಿದ್ದಾರೆ. ಅಂಬೇಡ್ಕರ್‌ರವರಿಗೆ ಮಾಡಿದ ಅವಮಾನವನ್ನು ದೇಶದ ಸಮಸ್ತ ಮಾದಿಗ ಸಮುದಾಯ ಎಂದಿಗೂ ಕ್ಷೇಮಿಸಬಾರದು ಎಂದರು.

ವಿಚಾರವಾದಿ ವಾದಿರಾಜ್ ಮಾತನಾಡಿ, ರಾಷ್ಟ್ರದಾದ್ಯಂತ ಬಿಜೆಪಿ ಸಂವಿಧಾನವನ್ನು ಬದಲಿಸಲಿ ಎಂದು ಅಪಪ್ರಚಾರವನ್ನು ಕಾಂಗ್ರೆಸ್ ಪಕ್ಷ ನಿರಂತರವಾಗಿ ಮಾಡುತ್ತಲೇ ಬಂದಿದೆ. ಸಂವಿಧಾನ ಕತೃ ಅಂಬೇಡ್ಕರ್‌ರವರಿಗೆ ಭಾರತರತ್ನ ಪ್ರಶಸ್ತಿ ನೀಡಲು ಕಾಂಗ್ರೆಸ್ ಪಕ್ಷ ನಿರಾಕರಿಸಿತು. ಸಂವಿಧಾನವನ್ನುರಚಿಸಿದಅಂಬೇಡ್ಕರವರೇ ಕಾಲಕ್ಕೆ ತಕ್ಕಂತೆ ಸಂವಿಧಾನವನ್ನು ಬದಲಾಯಿಸಿಕೊಳ್ಳುವಂತೆ ತಿಳಿಸಿದ್ದಾರೆ. ಬದಲಾವಣೆಗಳು ದೇಶದ ಅಭಿವೃದ್ಧಿಗೆ ಪೂರಕವಾಗಿರಬೇಕೆಂಬ ದೂರದೃಷ್ಟಿ ಅವರದ್ದಾಗಿತ್ತು. 75 ವರ್ಷದಲ್ಲಿ 106ಬಾರಿ ಸಂವಿಧಾನ ತಿದ್ದುಪಡಿಯಾಗಿದೆ. ವಿಶೇಷವಾಗಿ ಕಾಂಗ್ರೆಸ್ ಪಕ್ಷದ ಆಡಳಿತದಲ್ಲಿ 75ಬಾರಿ ತಿದ್ದುಪಡಿಯಾದರೆ ಕಾಂಗ್ರೆಸೇತರ ಸರ್ಕಾರಗಳು31ಬಾರಿತಿದ್ದುಪಡಿಸಿಮಾಡಿವೆ. ಎಸ್ಟಿ, ಎಸ್ಸಿ ನಿಗಮಗಳನ್ನು ಪ್ರತ್ಯೇಕಿಸಿ ಅವುಗಳಿಗೆ ಆರ್ಥಿಕ ಶಕ್ತಿಯನ್ನು ತುಂಬಲು ಅಟಲ್‌ಬಿಹಾರಿವಾಜಪೇಯಿ ಸರ್ಕಾರ ಕಾರಣವಾಗಿತ್ತು. ಇಂದಿರಗಾಂಧಿ ತಮ್ಮ ಆಡಳಿತ ರಕ್ಷಣೆಗಾಗಿ ಸಂವಿಧಾನವನ್ನ ತಿದ್ದುಪಡಿಸಿ ಮಾಡಿದ್ದರು. 1975ರಲ್ಲಿ ತುರ್ತು ಪರಿಸ್ಥಿತಿ ಜಾರಿಗೊಳಿಸಿ ದೇಶದ ನಾಗರಿಕರ ಹಕ್ಕನ್ನು ಕಸಿದುಕೊಂಡರು. 1975ರಲ್ಲಿ ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿದಾಗ ಸೋತ ಅಭ್ಯರ್ಥಿ ರಾಜನಾರಾಯಣ್ ಅಲಹಬಾದ್ ಹೈಕೋರ್ಟ್‌ಗೆ ತಕರಾರು ಅರ್ಜಿ ಸಲ್ಲಿಸಿದ್ದರು ಕೋರ್ಟ್ ರಾಜನಾರಾಯಣ ವಾದ ಎತ್ತಿಹಿಡಿಯಿತು. ಇದರ ವಿರುದ್ಧ ಇಂದಿರಾಗಾಂಧಿ ಸುಪ್ರೀಂಕೋರ್ಟ್ ಮೊರೆಹೋಗಿದ್ದು ಅದು ಸಹ ಅಹಲಬಾರ್ ಹೈಕೋರ್ಟ್ ತೀರ್ಪನ್ನು ಎತ್ತಿಹಿಡಿಯಿತು. ಇದರಿಂದ ಮುಜುಗರಕ್ಕೆ ಒಳವಾದ ಇಂದಿರಾಗಾಂಧಿ ತುರ್ತು ಪರಿಸ್ಥಿತಿ ಜಾರಿಗೊಳಿಸಿ ನೂರಾರು ರಾಷ್ಟ್ರಭಕ್ತರನ್ನು ಜೈಲಿಗೆ ಕಳಿಸಲಾಯಿತು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಂಡಲಾಧ್ಯಕ್ಷ ಸೂರನಹಳ್ಳಿಶ್ರೀನಿವಾಸ್, ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ, ಜಯಪಾಲಯ್ಯ, ಎಲೆಭದ್ರಿ, ಡಿ.ದಯಾನಂದ, ಕೆ.ಟಿ.ಕುಮಾರಸ್ವಾಮಿ, ಅನಿಲ್‌ಕುಮಾರ್, ದೇವರಾಜರೆಡ್ಡಿ, ಭಾರ್ಗವಿದ್ರಾವಿಡ, ಸಿ.ಎಸ್.ಪ್ರಸಾದ್, ಎನ್.ಓಬಳೇಶ್, ಎನ್.ರಘುಮೂರ್ತಿ, ಟಿ.ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕರಿಬಸವೇಶ್ವರಸ್ವಾಮಿ ಸನ್ನಿಧಿಯಲ್ಲಿ ಕಾರ್ತಿಕ ಮಾಸದ ಪೂಜೆ



» ಚಳ್ಳಕೆರೆ

ನಗರದ ಬಳ್ಳಾರಿ ರಸ್ತೆಯ ಹೊಸಮನೆ ಬಡಾವಣೆಯಲ್ಲಿರುವ ಶ್ರೀಕರಿಬಸವೇಶ್ವರಸ್ವಾಮಿ ದೇವಸ್ಥಾನದಲ್ಲಿ ಕಾರ್ತಿಕಮಾಸದ ಪೂಜೆಯನ್ನು ಹಮ್ಮಿಕೊಂಡು ಪೂಜೆಗೆ ಆಗಮಿಸಿದ್ದ ಎಲ್ಲಾ ಭಕ್ತರಿಗೆ ಪ್ರಸಾದ ವಿತರಣೆಯನ್ನು ಸಹ ಮಾಡಲಾಯಿತು.

ಹರಿಹರಸುತ ಸೇವಾ ಸಮಿತಿಯ ಪದಾಧಿಕಾರಿಗಳು ಶ್ರೀಅಯ್ಯಪ್ಪಸ್ವಾಮಿ ಪೂಜೆ ಹಾಗೂ ಪ್ರಸಾದ ವಿತರಣೆಯನ್ನು ಅಚ್ಚುಕಟ್ಟಾಗಿ ನಡೆಸಿಕೊಟ್ಟರು. ನೂರಾರು ಭಕ್ತರು ಸ್ವಯಂ ಪ್ರೇರಣೆಯಿಂದ ಭಾಗವಹಿಸಿದ್ದರು. ಬಾಬುಗುರುಸ್ವಾಮಿ ಅಕ್ಷಯಸ್ವಾಮಿ, ಮಂಜುಸ್ವಾಮಿ, ಶ್ರೀನಿವಾಸ್‌ಸ್ವಾಮಿ, ಜಗದೀಶ್ವರಸ್ವಾಮಿ ಮುಂತಾದವರು ಭಾಗವಹಿಸಿದ್ದರು.

### ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನವರಿ 8 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಲೋಕೋಪಯೋಗಿ ಇಲಾಖೆ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಹಾಗೂ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

### ಆಕ್ಷೇಪಣೆಗಳಿಗೆ ಅರ್ಜಿ

» ದಾವಣಗೆರೆ

ಮಹಾನಗರಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.26ರ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ, ದಾವಣಗೆರೆ ದಕ್ಷಿಣ ವಲಯ ಇವರಿಗೆ ಕಾವೇರಮ್ಮ ಹಿರಿಯ ಪ್ರಾಥಮಿಕ ಶಾಲೆ ಅನುಭೋಗದಲ್ಲಿರುವ ದಾವಣಗೆರೆ ಸಿಟಿ 4ನೇ ವಿಭಾಗ, ರಿ.ಸ.ನಂ:802 ರಲ್ಲಿ ಖಾತೆ ಸಂ:851/1, ಹೊಸಖಾತೆ ಸಂ:1636/1 ಅಳತೆ 88+85/2*288 ಅಡಿ ಚ.ಅ ಜಾಗವನ್ನು ಮಂಜೂರು ಮಾಡುವುದರ ಬಗ್ಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ 15 ದಿನಗಳೊಳಗಾಗಿ ಲಿಖಿತವಾಗಿ ಮಹಾನಗರಪಾಲಿಕೆ ಕಚೇರಿಗೆ ಸಲ್ಲಿಸಬಹುದೆಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಶಾಲಾ ಮಕ್ಕಳಿಗೆ ಪ್ರಬಂಧ ಮತ್ತು ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ

» ದಾವಣಗೆರೆ

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಿಲ್ಲಾ ಸರ್ವೇಕ್ಷಣಾ ಘಟಕ ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಪ್ರಾಥಮಿಕ ಆರೋಗ್ಯ ಕೇಂದ್ರ ಐಗೂರು, ಗ್ರಾಮ ಪಂಚಾಯಿತಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬಸವೇಶ್ವರ ಪ್ರೌಢಶಾಲೆ, ನಿವೇಧಿತಾ ಶಾಲೆ ಐಗೂರು ಇವರ ಸಂಯುಕ್ತ ಆಶ್ರಯದಲ್ಲಿ ತಂಬಾಕು ಮುಕ್ತ ಭಾರತ ಕಾರ್ಯಕ್ರಮದಡಿ ಶಾಲಾ ಮಕ್ಕಳಿಗೆ ಪ್ರಬಂಧ ಮತ್ತು ಚಿತ್ರಕಲೆ ಸ್ಪರ್ಧೆಯನ್ನು ಏರ್ಪಡಿಸಿ ಸ್ಪರ್ಧೆಯಲ್ಲಿ ವಿಜೇತರಾದ ವಿಧ್ಯಾರ್ಥಿಗಳಿಗೆ ಪ್ರಮಾಣ ಪತ್ರ ಮತ್ತು ನೆನಪಿನ ಕಾಣಿಕೆ ನೀಡಲಾಯಿತು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸುಚಿತ್ರ ಡಿ.ವಿ ಪ್ರಥಮ, , ವಿನುತ ಸಿ. ಆರ್ ದ್ವಿತೀಯ, ಜಾನವಿ ಸಿ.ಪಿ ತೃತೀಯ ಬಹುಮಾನ ಪಡೆದರು. ಶ್ರೀ ಬಸವೇಶ್ವರ ಪ್ರೌಢಶಾಲೆ ಯಶೋದ ಡಿ.ಎಂ ಪ್ರಥಮ ಬಹುಮಾನ, ನಾಗಮ್ಮ ದ್ವಿತೀಯ, ಅನುಷಾ ಕೆ ತೃತೀಯ ಬಹುಮಾನ, ನಿವೇದಿತ ಶಾಲೆ ಐಶ್ವರ್ಯ.ಕೆ ಪ್ರಥಮ, ಗಣೇಶ್ ದ್ವಿತೀಯ, ರೇಖಾ ತೃತೀಯ ಬಹುಮಾನ ಪಡೆದರು.

ಗ್ರಾಮ ಪಂಚಾಯತಿ ಅಧ್ಯಕ್ಷರಾದ ಜ್ಯೋತಿ, ಆಡಳಿತ ವೈದ್ಯಾಧಿಕಾರಿ ಡಾ॥ ಸೀತಾಲಕ್ಷ್ಮೀ, ಜಿಲ್ಲಾ ಸಲಹೆಗಾರ ಸತೀಶ್ ಕಲಹಾಳ್, ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಸೋಶಿಯಲ್ ವರ್ಕರ್ ಶೈಲಾ ಶಾಮನೂರು ಉಪಸ್ಥಿತರಿದ್ದರು.

### ಆಯ್ಕೆ ಸಮಿತಿ ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ನಿಗಮಗಳ ಫಲಾನುಭವಿಗಳನ್ನು ಆಯ್ಕೆ ಮಾಡಲು ಜನವರಿ 2 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ.ಬಿ.ಇಟ್ನಾಳ್ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ಸಭೆ ನಡೆಯಲಿದೆ ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

# ಜ.5, 6 ರಂದು ರಾಜ್ಯ ಮಟ್ಟದ ಯುವಜನೋತ್ಸವ ಆಯೋಜನೆಗೆ ಎಲ್ಲಾ ಸಿದ್ಧತೆ 10 ಸಾವಿರಕ್ಕಿಂತ ಹೆಚ್ಚು ಭಾಗಿ

## ಎಂ.ಬಿ.ಎ ಮೈದಾನದ ಮುಖ್ಯ ವೇದಿಕೆಯಲ್ಲಿ ಮುಖ್ಯಮಂತ್ರಿಗಳಿಂದ ಉದ್ಘಾಟನೆ

» ದಾವಣಗೆರೆ

ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಯಿಂದ ನಡೆಸುವ ರಾಜ್ಯ ಮಟ್ಟದ ಯುವಜನೋತ್ಸವ ಜನವರಿ 5 ಮತ್ತು 6 ರಂದು ನಡೆಯಲಿದ್ದು ನಗರದ ಎಂ.ಬಿ.ಎ. ಮೈದಾನದ ಮುಖ್ಯ ವೇದಿಕೆಯಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಕಾರ್ಯಕ್ರಮ ಉದ್ಘಾಟಿಸುವರು ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ. ತಿಳಿಸಿದರು.

ಅವರು ಸೋಮವಾರ (ಡಿ.30) ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಯುವಜನೋತ್ಸವ ಕಾರ್ಯಕ್ರಮದ ಸಿದ್ದತೆಗೆ ಜಿಲ್ಲಾಡಳಿತದಿಂದ ಕೈಗೊಂಡಿರುವ ಕಾರ್ಯಕ್ರಮ ರೂಪುರೇಷೆಗಳ ಬಗ್ಗೆ ವಿವಿಧ ಉಪ ಸಮಿತಿಗಳೊಂದಿಗೆ ಸಭೆ ನಡೆಸಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಯುವಜನೋತ್ಸವ ಉದ್ಘಾಟನಾ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಸೇರಿದಂತೆ ಸಂಸದರು, ಶಾಸಕರು, ವಿಧಾನ ಪರಿಷತ್ ಸದಸ್ಯರು ಸೇರಿದಂತೆ ಜನಪ್ರತಿನಿಧಿಗಳು ಮತ್ತು ಯುವ ಪ್ರಶಸ್ತಿ ಪುರಸ್ಕೃತರು ಭಾಗವಹಿಸುವರು.



7 ಸ್ಪರ್ಧೆಗಳು; ರಾಜ್ಯ ಮಟ್ಟದ ಯುವಜನೋತ್ಸವ ಸ್ಪರ್ಧೆಯಲ್ಲಿ 7 ಸ್ಪರ್ಧೆಗಳಿದ್ದು ಪ್ರತ್ಯೇಕವಾಗಿ ನಡೆಯಲಿವೆ. ಜಾನಪದ ನೃತ್ಯ ಸ್ಪರ್ಧೆಯು ಬಿಐಇಟಿ ಕಾಲೇಜಿನ ಎಸ್.ಎಸ್.ಎಂ. ಸಾಂಸ್ಕೃತಿಕ ಸಭಾಂಗಣ, ಜಾನಪದ ಗೀತೆ ಸ್ಪರ್ಧೆಯು ಬಾಪೂಜಿ ಎಂಬಿಎ ಕಾಲೇಜು ಸಭಾಂಗಣ, ವಿಜ್ಞಾನ ವಸ್ತು ಪ್ರದರ್ಶನ ಎಂಬಿಎ ಮೈದಾನದಲ್ಲಿನ ಎಸ್.ಎಸ್. ಪಬ್ಲಿಕ್ ಸ್ಕೂಲ್, ಕವನ ರಚನೆ ಎಂಬಿಎ ಕಾಲೇಜಿನ ಕೊಠಡಿ 1, ಕಥೆ ಬರೆಯುವುದು ಇಲ್ಲಿನ ಕೊಠಡಿ 2 ರಲ್ಲಿ ಹಾಗೂ ಚಿತ್ರಕಲೆ ಸ್ಪರ್ಧೆ ಮತ್ತು ಘೋಷಣ ಸ್ಪರ್ಧೆಯು ಲಲಿತ ಕಲಾ ಮಹಾವಿದ್ಯಾಲಯದಲ್ಲಿ ನಡೆಯಲಿದೆ.

ರಾಜ್ಯ ಎಲ್ಲಾ ಜಿಲ್ಲೆಗಳಿಂದ ಏಳು ಸ್ಪರ್ಧೆಗಳಲ್ಲಿ ಭಾಗವಹಿಸಲು ಯುವ ಸ್ಪರ್ಧಾಳುಗಳು ಆಗಮಿಸುವರು. ಇಲ್ಲಿನ ಸ್ಪರ್ಧೆಯಲ್ಲಿ ವಿಜೇತರಾಗುವವರಿಗೆ ಮೊದಲ ಬಹುಮಾನವಾಗಿ ರೂ.25000, ದ್ವಿತೀಯ ರೂ.15000 ಮತ್ತು ತೃತೀಯ ಬಹುಮಾನವಾಗಿ ರೂ.10000 ಗಳನ್ನು ಪ್ರಶಸ್ತಿ ಪತ್ರದೊಂದಿಗೆ ನಗದು ನೀಡಲಾಗುತ್ತದೆ. ಇಲ್ಲಿ ವಿಜೇತರಾದವರು ಜನವರಿ 11 ಮತ್ತು 12 ರಂದು ದೆಹಲಿಯಲ್ಲಿ ನಡೆಯಲಿರುವ ರಾಷ್ಟ್ರೀಯ ಯುವಜನೋತ್ಸವದಲ್ಲಿ ಭಾಗವಹಿಸುವರು ಎಂದರು.

ಜನಪದ ರ್‍ಯಾಲಿ; ಯುವಜನೋತ್ಸವವು ಜನವರಿ 5 ರಂದು ಬೆಳಗ್ಗೆ ಉದ್ಘಾಟನೆಯಾಗಲಿದ್ದು ಇದರ ಅಂಗವಾಗಿ ಬೆಳಗ್ಗೆ 9 ಗಂಟೆಯಿಂದ ವಿವಿಧ ಕಲಾತಂಡಗಳೊಂದಿಗೆ ಹಾಗೂ ಶಾಲಾ, ಕಾಲೇಜು ವಿದ್ಯಾರ್ಥಿಗಳೊಂದಿಗೆ ಜನಪದ ಮೆರವಣಿಗೆ ಮೂಲಕ ಎಂಬಿಎ ಮೈದಾನಕ್ಕೆ ತೆರಳಿ ಉದ್ಘಾಟನೆಯಲ್ಲಿ ಭಾಗಿಯಾಗಲಿದ್ದಾರೆ. ಕಲಾಮೇಳದಲ್ಲಿ ದಕ್ಷಿಣ ವಲಯದ ಸಾಂಸ್ಕೃತಿಕ ಕೇಂದ್ರದಿಂದ 10 ಕ್ಕಿಂತ ಹೆಚ್ಚು ತಂಡಗಳು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 10 ಕ್ಕೂ ಹೆಚ್ಚು ಕಲಾ ತಂಡಗಳು ಸೇರಿದಂತೆ ವಿವಿಧ ಕಾಲೇಜುಗಳು ವಿದ್ಯಾರ್ಥಿಗಳ ತಂಡಗಳು ಕಲಾ ಮೇಳದಲ್ಲಿ ಭಾಗಿಯಾಗಲಿದ್ದು ಆಕರ್ಷಕ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ ಎಂದರು.

ಕದ್ರಿ ಮಣಿಕಂಠ ಮತ್ತು ತಂಡದಿಂದ ಸಾಂಸ್ಕೃತಿಕ ಸಂಜೆ; ಯುವಜನೋತ್ಸವ ಅಂಗವಾಗಿ ಖ್ಯಾತ ಕಲಾವಿದರಾದ ಕದ್ರಿ ಮಣಿಕಂಠ ಮತ್ತು ತಂಡದವರಿಂದ ಜನವರಿ 5 ರ ಸಂಜೆ 5 ಗಂಟೆಯಿಂದ ಪ್ರಧಾನ ವೇದಿಕೆ ಎಂಬಿಎ ಮೈದಾನದಲ್ಲಿ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ವೇದಿಕೆಯಲ್ಲಿ ಐದು ಸಾವಿರಕ್ಕಿಂತಲೂ ಹೆಚ್ಚು ಆಸನದ ವ್ಯವಸ್ಥೆ ಮಾಡಲಾಗಿದ್ದು ಸುಮಾರು 10 ಸಾವಿರಕ್ಕೂ ಹೆಚ್ಚಿನ ಜನರು ಸೇರುವ ನಿರೀಕ್ಷೆ ಹೊಂದಲಾಗಿದೆ. ಗ್ಲಾಸ್‌ಹೌಸ್‌ನಲ್ಲಿ ಫಲಪುಷ್ಪ ಪ್ರದರ್ಶನ ಭಾನುವಾರದಿಂದ ನಡೆಯುತ್ತಿದ್ದು ಜನವರಿ 5 ರವರೆಗೆ ಯುವಜನೋತ್ಸವ ಹಿನ್ನಲೆಯಲ್ಲಿ ಮುಂದುವರೆಸಲಾಗಿದ್ದು ದಾವಣಗೆರೆ ಜನತೆಯು ಯುವಜನೋತ್ಸವವನ್ನು ವೀಕ್ಷಣೆ ಮಾಡುವ ಮೂಲಕ ಪ್ರೋತ್ಸಾಹಿಸಬೇಕಾಗಿದೆ ಎಂದರು.

ಯುವಜನೋತ್ಸವ ವೀಕ್ಷಣೆಗೆ ನಗರ ಸಾರಿಗೆ; ಜನವರಿ 5 ಮತ್ತು 6 ರಂದು ನಡೆಯುವ ಯುವಜನೋತ್ಸವ ವೀಕ್ಷಣೆಗಾಗಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಲು ಕೆಎಸ್‌ಆರ್‌ಟಿಸಿ ಯಿಂದ ನಿರಂತರ ಬಸ್ ಸೇವೆಯನ್ನು ಒದಗಿಸಲಾಗುತ್ತಿದೆ. ವೀಕ್ಷಣೆ ಮಾಡುವವರು ಈ ಬಸ್ ಸೌಲಭ್ಯ ಪಡೆಯಬಹುದಾಗಿದ್ದು ಎಲ್ಲಾ ವೇದಿಕೆಗಳಿಗೂ ಬಸ್ ಕರೆದುಕೊಂಡು ಹೋಗಲಿದೆ ಎಂದರು. ಜನಪ್ರತಿನಿಧಿಗಳು, ಯುವ ಪುರಸ್ಕೃತರು ಭಾಗಿ; ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು ಸೇರಿದಂತೆ ರಾಜ್ಯದಲ್ಲಿನ ಪ್ರಮುಖ ಯುವ ಪುರಸ್ಕೃತರು ಭಾಗವಹಿಸುವರು.ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಊಟದ ವ್ಯವಸ್ಥೆ, ಕುಡಿಯುವ ನೀರು ಸೇರಿದಂತೆ ಸೂಕ್ತ ಬಂದೋಬಸ್ತ್ ಕಲ್ಪಿಸಲಾಗುತ್ತಿದೆ. ವಿವಿಧ ಜಿಲ್ಲೆಗಳಿಂದ ಆಗಮಿಸುವ ಯುವ ಸ್ಪರ್ಧಾಳುಗಳಿಗೆ ಊಟ, ವಸತಿ ಸೇರಿದಂತೆ ಜಿಲ್ಲೆಯಲ್ಲಿನ ಪ್ರೇಕ್ಷಣೀಯ ಸ್ಥಳಗಳಿಗೆ ಪ್ರವಾಸ ಹಮ್ಮಿಕೊಳ್ಳಲು ಸೂಕ್ತ ವಾಹನಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದರು.

ಈ ವೇಳೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ.ಸಂತೋಷ್, ಪಾಲಿಕೆ ಆಯುಕ್ತೆ ರೇಣುಕಾ ಉಪಸ್ಥಿತರಿದ್ದರು.

# ದೇವಿ ಪುರಾಣ ಚಂಡ ಮುಂಡರ ವಧಾ ಪ್ರಸಂಗ

» ಚಿತ್ರದುರ್ಗ

ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘವು ತನ್ನ 40ನೇ ವಾರ್ಷಿಕೋತ್ಸವದ ಅಂಗವಾಗಿ ಏರ್ಪಡಿಸಿದ್ದ 17ನೇ ಕಾರ್ಯಕ್ರಮದ ಅಂಗವಾಗಿ ದೇವಿ ಭಾಗವತದ ಚಂಡ ಮುಂಡರ ಪ್ರಸಂಗದ ವಾಚನ ವ್ಯಾಖ್ಯಾನವನ್ನು ಇಲ್ಲಿನ ಜೆಸಿಆರ್ ಬಡಾವಣೆಯ ಗಣಪತಿ ದೇವಾಲಯದ ಸಭಾಂಗಣದಲ್ಲಿ ಏರ್ಪಡಿಸಲಾಗಿತ್ತು. ಕಾರ್ಯಕ್ರಮದಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾ ಕಾರ್ಯದರ್ಶಿ ಹುರುಳಿ ಎಂ. ಬಸವರಾಜ್ ಅವರು ಗ್ರಾಮೀಣ ಗಾಯಕ ಕಲಾ ಪ್ರತಿಭೆ ಮಲ್ಲಾಪುರ ಗೊಲ್ಲರಟ್ಟಿಯ ಸಿ. ವೀರಣ್ಣ ಅವರ ವಾಚನಕ್ಕೆ ವಿದ್ಯುತ್ ಪೂರ್ಣ ವ್ಯಾಖ್ಯಾನ ನೀಡಿದರು. ಒಟ್ಟಿನಲ್ಲಿ ಒಂದು ಪ್ರಸಂಗದ ಹೆಸರಲ್ಲಿ ಕವಿ ಚಿದಾನಂದ ಅವಧೂತರ ದೇವಿ ಭಾಗವತದ ಸಮಗ್ರ ಸ್ವರೂಪವನ್ನು ಶ್ರೋತೃಗಳ ಮುಂದೆ ಮಂಡಿಸಿದ ಪರಿ ವಿಶೇಷವಾಗಿತ್ತು.

ದೇವಸ್ಥಾನದ ಮಾರುತಿ ಭಜನಾ ಮಂಡಳಿಯವರ ಗಮಕ ಪ್ರಾರ್ಥನೆಯೊಂದಿಗೆ ಕಾಯೌ ಶ್ರೀ ಗೌರಿ ಎಂಬ ಬಸಪ್ಪ ಶಾಸ್ತ್ರಿ ವಿರಚಿತ ದೇವಿ ಪ್ರಾರ್ಥನೆಯೊಂದಿಗೆ ಆರಂಭವಾದ ಸಭೆಯಲ್ಲಿ ಸಂಘದ ನಿರ್ದೇಶಕಿ ಬಿ.ಎಲ್. ಉಮಾ ಸ್ವಾಗತಿಸಿದರು. ಮುಖ್ಯ ಅತಿಥಿಗಳಾಗಿದ್ದ ಶ್ರೀ ವಾರಿ ಭಜನಾ ಮಂಡಳಿಯ ಅಧ್ಯಕ್ಷಣಿ ಸತ್ಯಪ್ರಭಾ ವಸಂತಕುಮಾರ್ ಅವರು ತಮ್ಮ ಭಾಷಣದಲ್ಲಿ ಚಿತ್ರದುರ್ಗದ ಗಮಕ ಕಲಾಭಿಮಾನಿಗಳ ಸಂಘದ ಕಾರ್ಯವನ್ನು ಶ್ಲಾಘಿಸಿ ತಮ್ಮ ಸಂಘದಲ್ಲಿ ಈಚೆಗೆ ನಡೆಯುತ್ತಿರುವ ಪ್ರಾರ್ಥನಾ ನಿವೇದನೆಯಲ್ಲಿ ಗಮಕ ಕಲೆಯನ್ನು ಅಳವಡಿಸಿಕೊಳ್ಳುತ್ತಿರುವುದಾಗಿ ಹೇಳಿದರು.



ಗಮಕ ಕಲಾಭಿಮಾನಿಗಳ ಸಂಘದ ಅಧ್ಯಕ್ಷಣಿ ಕೆ.ಆರ್ .ರಮದೇವಿ ವೆಂಕಣ್ಣಾಚಾರ್ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ ಗಮಕಲೆಯನ್ನು ಉಳಿಸಿ ಬೆಳೆಸಲು ನಿರಂತರ ಪ್ರಯತ್ನ ನಡೆಸಿರುವುದಾಗಿಯೂ, ಕಲಾಭಿಮಾನಿಗಳು ಅತಿಶಯವಾದ ಸಹಕಾರ ನೀಡಿ ಸಹಾಯ ಮಾಡಬೇಕೆಂದು ಹೇಳಿದರು.

ಸಭೆಯಲ್ಲಿ ಜಿ .ಆರ್ .ಕೃಷ್ಣಮೂರ್ತಿ, ಕೆ. ವೆಂಕಣ್ಣಾಚಾರ್, ಅಮೆರಿಕ ಕನ್ನಡ ಸಂಘಗಳ ಪ್ರಮುಖ ಕಾರ್ಯಕರ್ತರಾದ ಜಿ.ಕೆ .ಸತೀಶ್, ಗಣಪತಿ ದೇವಸ್ಥಾನ ಸಮಿತಿಯ ಪ್ರೊ. ಹರೀಶ್,ಚಿದಾನಂದಪ್ಪ ಮೊದಲಾದವರು ಹಾಜರಿದ್ದರು. ಕಾರ್ಯಕರ್ತರಾದ ಶಶಿಧರ್ ಶ್ಯಾನುಭೋಗ್ ಕಾರ್ಯಕ್ರಮ ನಿರ್ವಹಣೆ ಮಾಡಿದರು.

ಸಮಾರಂಭದ ಅಂಗವಾಗಿ ವಾಚಕಕಾರ ಸಿ .ವೀರಣ್ಣ ಅವರನ್ನು ವ್ಯಾಖ್ಯಾನಕಾರ ಹುರುಳಿ ಬಸವರಾಜ ಹಾಗೂ ಸತ್ಯಪ್ರಭಾವಸಂತಕುಮಾರ್ ಅವರನ್ನು ಸಂಘದ ಪರವಾಗಿ ನಿರ್ದೇಶಕರಾದ ಲಕ್ಷ್ಮಿ ವಾಸುದೇವ ಶ್ರೇಷ್ಠಿ, ಅನಂತ ಕೃಷ್ಣ, ಮೀನಾಕ್ಷಿ ಭಟ್ ಅವರುಗಳು ಸನ್ಮಾನಿಸಿ ಗೌರವಿಸಿದರು.

## ಸರ್ವೋದಯ ಶಾಲೆ ವಾರ್ಷಿಕೋತ್ಸವ



» ಪರಶುರಾಂಪುರ

ಇಲ್ಲಿಯ ಸರ್ವೋದಯ ಶಾಲೆಯಆವರಣದಲ್ಲಿ ಸಾಂಸ್ಕೃತಿಕ ಸೌರಭ(ಶಾಲಾ ವಾರ್ಷಿಕೋತ್ಸವ) ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮಕ್ಕೂ ಮೊದಲುಡಾ.ಮನಮೋಹನ್ ಸಿಂಗ್ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಪ್ರಾಸ್ಥವಿಕ ನುಡಿಯನ್ನ ಸಂಸ್ಥೆಯ ಸಂಸ್ಥಾಪಕ ಹಾಗೂ ಕಾರ್ಯದರ್ಶಿಚೆನ್ನಕೇಶವ ಪ್ರಾಸ್ತಾವಿಕ ನುಡಿಗಳನ್ನಾಡುತ್ತಾ,ಮಕ್ಕಳ ಭವಿಷ್ಯರೂಪಿಸುವಲ್ಲಿ ಶಿಕ್ಷಕರು ಹಾಗೂ ಪಾಲಕರ ಪಾತ್ರ ಮಹತ್ವದ್ದಾಗಿದೆ .

ಮಕ್ಕಳು ಹೆಚ್ಚಿನ ಸಮಯ ಶಿಕ್ಷಕ ರೊಂದಿಗೆ ಶಾಲೆಯಲ್ಲಿ ಕಳೆಯುತ್ತಾರೆ. ಮಕ್ಕಳ ಮೇಲೆ ಶಿಕ್ಷಕರು ಪ್ರಭಾವ ಬೀರುವುದರಿಂದ ಮಕ್ಕಳ ಉತ್ತಮ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುವಂತೆ ಹೇಳಿದರು.ಮಕ್ಕಳಿಗೆ ಪಠ್ಯಕ್ರಮಎಷ್ಟು ಮುಖ್ಯವೋ ಪಠ್ಯೇತರಚಟುವಟಿಕೆಅಷ್ಟೇ ಮುಖ್ಯಎಂದು ತಿಳಿಸಿದರು.

ಸಂಸ್ಥೆಯಅಧ್ಯಕ್ಷೆ ವಿಮಲಾಕ್ಷಿ,ಆಡಳಿತಾಧಿಕಾರಿ ತಿಮ್ಮರಾಯಪ್ಪ,ಆಡಳಿತ ಕಾರ್ಯನಿರ್ವಾಹಕ ಕುಮಾರ್, ಅಧೀಕ್ಷಕ ಪಂಚಾಕ್ಷರಪ್ಪ, ಸತ್ಯನಾರಾಯಣ ಶಾಸ್ತ್ರಿ,ಜಿ.ಬಿ ಸಂಯೋಜಕ ಹರೀಶ್‌ಯಾದವ್, ಪ್ರಾಂಶುಪಾಲ ಶಾಂತಕುಮಾರ್, ಮುಖ್ಯೋಪಾಧ್ಯಾಯರಾದ ಶ್ರೀಶೈಲ ಮೂರ್ತಿ, ಅಶ್ವಿನಿ , ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗದವರು ಸೇರಿದಂತೆಗ್ರಾಪಂ ಸದಸ್ಯರು ಹಾಗೂ ವಿದ್ಯಾರ್ಥಿಗಳು, ಪೋಷಕರು,ಸಾವ9ಜನಿಕರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಕ್ಷಯಮುಕ್ತ ಅಭಿಯಾನದಲ್ಲಿ ಟಿಹೆಚ್ಓ ಡಾ.ಬಿ.ವಿ.ಗಿರೀಶ್

# ಕ್ಷಯ ರೋಗ ನಿಯಂತ್ರಣ ಸಾರ್ವಜನಿಕ ಕಾಳಜಿ ಆಗಬೇಕು

» ಚಿತ್ರದುರ್ಗ

ಕ್ಷಯ ರೋಗ ನಿಯಂತ್ರಣ ಸಾರ್ವಜನಿಕ ಕಾಳಜಿ ಆಗಬೇಕು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಚಿಕ್ಕಗೊಂಡನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಸೋಮವಾರ ಜರುಗಿದ ಕ್ಷಯ ಮುಕ್ತ 100 ದಿನಗಳ ಅಭಿಯಾನ ಕಾರ್ಯಕ್ರಮದಲ್ಲಿ ಅವರ ಮಾತನಾಡಿದರು.

ಕ್ಷಯ ರೋಗವು ಭಾರತದ ಸಾರ್ವಜನಿಕ ಆರೋಗ್ಯಕ್ಕೆ ಅತಿ ದೊಡ್ಡ ತೊಂದರೆಗಳಲ್ಲಿ ಒಂದಾಗಿರುತ್ತದೆ. ಪ್ರತಿ ವರ್ಷ ವಿಶ್ವದಲ್ಲೇ ಅತಿ ಹೆಚ್ಚು ಜನ ಕ್ಷಯರೋಗಕ್ಕೆ ತುತ್ತಾಗುತ್ತಾರೆ. ಭಾರತವನ್ನು ಕ್ಷಯ ಮುಕ್ತಗೊಳಿಸಲು ಸಮುದಾಯವು ಒಗ್ಗೂಡಿ ಕೆಲಸ ಮಾಡಬೇಕಾಗಿದೆ. ಕ್ಷಯ ರೋಗವು ಮೈಕೋ ಬ್ಯಾಕ್ಟೀರಿಯಾ ಟ್ಯೂಬರ್ ಕ್ಯುಲೋಸಿಸ್ ಎಂಬ ಸೂಕ್ಷ್ಮ ರೋಗಾಣುವಿನಿಂದ ಬರುತ್ತದೆ. ಕ್ಷಯರೋಗಿಯು ಕೆಮ್ಮಿದಾಗ ಅಥವಾ ಸೀಮಿದಾಗ ಹೊರಬರುವ ತುಂತುರು ರೋಗಾಣುಗಳು ಗಾಳಿಯ ಮೂಲಕ ಆರೋಗ್ಯವಂತ ವ್ಯಕ್ತಿಯ ಶ್ವಾಸಕೋಶ ಸೇರಿ ಸೋಂಕು ಉಂಟುಮಾಡುತ್ತದೆ ಎಂದರು.



ಕ್ಷಯ ರೋಗಿಗಳು ಕೆಮ್ಮುವಾಗ ಹಾಗೂ ಸೀನುವಾಗ ಬಾಯಿ ಮತ್ತು ಮೂಗಿನ ಹತ್ತಿರ ಕರವಸ್ತ್ರ ಇಟ್ಟುಕೊಳ್ಳಬೇಕು. ರೋಗಿಯ ಕಫವನ್ನು ಮನಸ್ಸಿಗೆ ಬಂದ ಕಡೆ ಉಗಿಯಬಾರದು. ಕಫವನ್ನು ಡಬ್ಬಿಯಲ್ಲಿ ಶೇಖರಿಸಿ ಗುಂಡಿ ತೋಡಿ ಮುಚ್ಚಬೇಕು. ನವಜಾತ ಶಿಶುಗಳಿಗೆ ಬಿಸಿಜಿ ಲಸಿಕೆ ಹಾಕಿಸಬೇಕು ಎಂದರು.

ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಮಾತನಾಡಿ, ನಿಮ್ಮ ಮನೆಯಲ್ಲಿ ಹಾಗೂ ಸುತ್ತಮುತ್ತಲಿನವರಲ್ಲಿ ಟಿಬಿ ರೋಗದ ಲಕ್ಷಣಗಳು ಉಳ್ಳುವವರನ್ನು ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ಪರೀಕ್ಷೆಗಾಗಿ ಕಳುಹಿಸಬೇಕು. ಟಿಬಿ ರೋಗವನ್ನು ಬೇಗ ಪತ್ತೆ ಹಚ್ಚಿ ಪೌಷ್ಟಿಕ ಆಹಾರ ಸೇವಿಸಿ ಸಮಯಕ್ಕೆ ಸರಿಯಾಗಿ ಸೂಕ್ತ ಚಿಕಿತ್ಸೆ ಪಡೆದುಕೊಳ್ಳಿ. ಕ್ಷಯ ರೋಗದ ಅಪಾಯ ಇರುವವರನ್ನು ಆರೈಕೆ ಮಾಡಿ ಎಂದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿದರು.

ಕಾರ್ಯಕ್ರಮದಲ್ಲಿ ಚಿಕ್ಕಗೊಂಡನಹಳ್ಳಿ ಪ್ರಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸಚಿನ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಂಕರ್ ನಾಯಕ್, ಪ್ರವೀಣ್ ಕುಮಾರ್, ಸಮುದಾಯ ಆರೋಗ್ಯ ಅಧಿಕಾರಿ ಲೋಹಿತ್ ಕುಮಾರ್, ಪ್ರಯೋಗಶಾಲಾ ತಂತ್ರಜ್ಞ ನಾಗರಾಜ್, ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ಸುಧಾ, ಪ್ರಿಯಾಂಕಾ, ಕೆ.ಟಿ.ದೇವೇಂದ್ರ, ಗ್ರಾಮಸ್ಥರು ಉಪಸ್ಥಿತರಿದ್ದರು.



# ಕರ್ನಾಟಕ ದಲಿತ ಚಳವಳಿ 50 ವರ್ಷಗಳು........

ಇದು ಭಾಗಶಃ ಸರಿಯಷ್ಟೇ. ಏಕೆಂದರೆ ದಲಿತ ಚಳುವಳಿಗೆ ಶತಶತಮಾನಗಳ ಇತಿಹಾಸವಿದೆ. ಅದು ಮಾನಸಿಕವಾಗಿ, ದೈಹಿಕವಾಗಿ, ಅಸಹಾಯಕವಾಗಿ ಆಕ್ರೋಶವಾಗಿ, ಮೌನವಾಗಿ ಬೇರೆ ಬೇರೆ ರೂಪ ಪಡೆಯುತ್ತಾ ಸದಾ ಕಾಲ ಚಲಿಸುತ್ತಾ, ಆಂತರ್ಯದ ತುಮುಲಗಳು ವ್ಯಕ್ತವಾಗುತ್ತಲೇ ಇದೆ. ಆದರೆ ಅದಕ್ಕೆ ಪ್ರಜಾಸತ್ತಾತ್ಮಕ, ಸಂಘಟನಾತ್ಮಕ, ಸಾಹಿತ್ಯಾತ್ಮಕ, ರಾಜಕೀಯ ಮತ್ತು ಸಾಮಾಜಿಕ ಜನ ಮನ್ನಣೆ ಸಿಕ್ಕಿ 50 ವರ್ಷಗಳಾಗಿದೆ ಎಂದು ಹೇಳಬಹುದು.....

ಈ ನೆಲದ ಮೂಲನಿವಾಸಿಗಳ ಒಂದು ಬೃಹತ್ ಸಮುದಾಯ ಸ್ವಾತಂತ್ರ್ಯ ದೊರೆತ ಸುಮಾರು 77 ವರ್ಷಗಳ ನಂತರವೂ ತಮ್ಮ ಹಕ್ಕುಗಳಿಗಾಗಿ, ಮಾನ್ಯತೆಗಾಗಿ, ಸಮಾನತೆಗಾಗಿ ಈಗಲೂ ಹೋರಾಡಬೇಕಾದ ಅನಿವಾರ್ಯತೆ ಇದೆ ಎನ್ನುವುದಾದರೆ ಅದಕ್ಕೆ ಇತರ ಎಲ್ಲಾ ಸಮುದಾಯಗಳು ನಾಚಿಕೆ ಪಟ್ಟುಕೊಳ್ಳಬೇಕು. ಸದಾಕಾಲ ಧರ್ಮ, ದೇವರು, ನ್ಯಾಯ, ನೀತಿ, ವಸುದೈವ ಕುಟುಂಬಂ ಎಂದು ಹೇಳುವ, ಜಗತ್ತಿನಲ್ಲಿಯೇ ಆಧ್ಯಾತ್ಮದ ತವರೂರು ಎಂದು ಕರೆದುಕೊಳ್ಳುವ ಸಮಾಜದಲ್ಲಿ, ಈಗಲೂ ಜಾತಿಯ ಮೀಸಲಾತಿ ಇರುವುದು, ಅಸ್ಪೃಶ್ಯತಾ ಆಚರಣೆ ಇರುವುದು, ಜಾತಿಯ ಕಾರಣಕ್ಕಾಗಿ ನಿಂದನೆಗೆ ಒಳಗಾಗುತ್ತಿರುವುದು ಇನ್ನೂ ಅಸ್ತಿತ್ವದಲ್ಲಿದೆ ಎನ್ನುವುದಾದರೆ ಇದನ್ನು ಸಂಪೂರ್ಣವಾಗಿ ನಾಗರಿಕ ಸಮಾಜ ಎನ್ನಲು ಸಾಧ್ಯವಿಲ್ಲ. ಏಕೆಂದರೆ ನಾಗರಿಕ ಸಮಾಜದ ಮೂಲಭೂತ ಲಕ್ಷಣವೇ ಸಮಾನತೆ....

ಇದು ಒಂದು ಸಾರ್ವತ್ರಿಕ ಸತ್ಯವಾದರೆ, ಮತ್ತೊಂದೆಡೆ ಕರ್ನಾಟಕದಲ್ಲಿ ಈ ಐವತ್ತು ವರ್ಷಗಳಲ್ಲಿ ದಲಿತ ಚಳವಳಿ ನಡೆದು ಬಂದ ಹಾದಿ, ಅದು ಪಡೆದ ವಿವಿಧ ರೂಪಗಳು, ಒಡೆದ ಹಲವಾರು ಕವಲುಗಳು, ಈಗಿನ ವಾಸ್ತವಿಕತೆ ಮತ್ತು ಭವಿಷ್ಯದ ಸವಾಲುಗಳ ಬಗ್ಗೆ ಪುನರ್ ವಿಮರ್ಶೆ ಮಾಡಿಕೊಳ್ಳುವ ಸಮಯ ಬಂದಿದೆ......

ಸ್ವಾತಂತ್ರ್ಯ ಪೂರ್ವದ ದಲಿತ ಬಂಡಾಯಗಳಿಗೆ ಬಹುತೇಕ ಶೋಷಕರು ವರ್ತಿಸುತ್ತಿದ್ದ ಅಮಾನವೀಯತೆಯೇ ಮೂಲ ದ್ರವ್ಯವಾದರೆ, ಸ್ವಾತಂತ್ರ್ಯ ನಂತರದ ದಲಿತ ಚಳುವಳಿಗೆ ನಿಜವಾದ ಪ್ರೇರಣೆ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಎಂಬ ವ್ಯಕ್ತಿ, ವ್ಯಕ್ತಿತ್ವ, ಚಿಂತಕ, ಸಾಧಕ ಕಾರಣ ಎಂಬುದರಲ್ಲಿ ಯಾವುದೇ ಅನುಮಾನವಿಲ್ಲ. ಇಡೀ ಅಸ್ಪೃಶ್ಯರ ಎಲ್ಲ ನೋವುಗಳಿಗೂ ಬೆಳಕಾಗಿ ಮೂಡಿದ ನೈಜ ಹೋರಾಟಗಾರ ಬಾಬಾ ಸಾಹೇಬ್ ಅಂಬೇಡ್ಕರ್....

ಕೇವಲ ಸಮಸ್ಯೆಗಳು ಮಾತ್ರವಲ್ಲ, ಅದಕ್ಕೆ ಪರಿಹಾರಗಳು ಮಾತ್ರವಲ್ಲ, ಪ್ರಾಯೋಗಿಕವಾಗಿ ಅವುಗಳನ್ನು ಹೆಚ್ಚು ಕಡಿಮೆ ಜಾರಿಗೆ ತಂದ ಮಹಾನ್ ನಾಯಕ ಬಾಬಾ ಸಾಹೇಬ್. ಆ ಹಿನ್ನೆಲೆಯಲ್ಲಿಯೇ ದಲಿತ ಚಳವಳಿ ಬೆಳೆದು ಬಂದಿದೆ. ಆದರೆ ಅವರ ಆಶಯಗಳು ಸಂಪೂರ್ಣ ಯಶಸ್ವಿಯಾಗಿದೆಯೇ ಎಂದರೆ ಮತ್ತೆ ಭಾಗಶಃ ಮಾತ್ರ ಎಂದೇ ಉತ್ತರಿಸಬೇಕಾಗುತ್ತದೆ.....

ಅದಕ್ಕೆ ಕೇವಲ ಮೇಲ್ವರ್ಗದವರ ಮೇಲೆ ಮಾತ್ರ ಬೆರಳು ತೋರಿಸುತ್ತಾ, ಪಲಾಯನವಾದ ಮಾಡುವ ಹಾಗಿಲ್ಲ. ಈ ಕ್ಷಣದ ಸಮಾಜದಲ್ಲಿ ನಿಜಕ್ಕೂ ಶೋಷಿತರು ಸಹ ತಮ್ಮ ಕರ್ತವ್ಯದಲ್ಲಿ ವಿಫಲರಾಗುತ್ತಿದ್ದಾರೆ ಎಂಬುದನ್ನು ಸಹ ಎತ್ತಿ ತೋರಿಸಬೇಕಾಗುತ್ತದೆ. ಏಕೆಂದರೆ ಇದು ಸ್ವತಂತ್ರ ಪೂರ್ವವಲ್ಲ ಅಥವಾ ಅಸಹಾಯಕ,ಅಮಾಯಕ, ಅನಕ್ಷರಸ್ಥರ ಕಾಲವೂ ಅಲ್ಲ. ಬಹುತೇಕ ಎಲ್ಲರೂ ಅಕ್ಷರಸ್ಥರು, ವಿದ್ಯಾವಂತರು, ಜಾಗೃತವಂತರು, ಸಮೂಹ ಸಂಪರ್ಕ ಮಾಧ್ಯಮದ ಮೇಲೆ ನಿಯಂತ್ರಣ ಹೊಂದಿರುವವರು ಆಗಿದ್ದಾರೆ.....

ಇಂತಹ ಸಂದರ್ಭದಲ್ಲಿ ನಿಜಕ್ಕೂ ಶೋಷಿತರು ಸಹ ಜವಾಬ್ದಾರಿ ತೆಗೆದುಕೊಳ್ಳಬೇಕಾಗುತ್ತದೆ. ಅಂದು ಒಬ್ಬ ಬಾಬಾ ಸಾಹೇಬ್ ಮಾಡಿದ ಕೆಲಸಗಳಲ್ಲಿ ಶೇಕಡಾ ಹತ್ತರಷ್ಟಾದರೂ ಈಗಿರುವ



ಲಕ್ಷಾಂತರ ಬಾಬಾ ಸಾಹೇಬ್ ಗಳ ಕೈಯಲ್ಲಿ ಮಾಡುವ ಅವಕಾಶವಿದೆ, ವೇದಿಕೆ ಇದೆ. ಅದನ್ನು ಸರಿಯಾಗಿ ನಿರ್ವಹಿಸುತ್ತಿಲ್ಲ ಎಂಬ ಕೊರಗು ಅನೇಕರನ್ನು ಕಾಡುತ್ತಿದೆ......

ಕೇವಲ ರಾಜಕೀಯ, ಆರ್ಥಿಕ ಹಕ್ಕು, ಸಮಾನತೆ ಮತ್ತು ಸ್ವಾತಂತ್ರ್ಯಕ್ಕೆ ಹೋರಾಟ ಮಾಡುತ್ತಾ ನಿಜವಾದ ಮಣ್ಣಿನ ಸಾಂಸ್ಕೃತಿಕ ಪ್ರಜ್ಞೆಯನ್ನು ಕಡೆಗಣಿಸಿದ ಕಾರಣದಿಂದ ಬಾಬಾ ಸಾಹೇಬರ ಆಶಯ ಪೂರ್ಣಗೊಳ್ಳಲು ಸಾಧ್ಯವಾಗುತ್ತಿಲ್ಲ. ಅದಕ್ಕೆ ಇನ್ನೊಂದು ತಲೆಮಾರು ಬೇಕಾಗಬಹುದು. ಆದರೆ ಆ ನಿಟ್ಟಿನಲ್ಲಿ ಪ್ರಯಾಣ ಪ್ರಾರಂಭಿಸಬೇಕಾಗಿದೆ..... ಒಬ್ಬ ವ್ಯಕ್ತಿಯ ವ್ಯಕ್ತಿತ್ವದಲ್ಲಿ ವೈಯಕ್ತಿಕವಾಗಿ ಆ ನೆಲದ ಸಾಂಸ್ಕೃತಿಕ ವ್ಯಕ್ತಿತ್ವ ಮಿಳಿತವಾಗಿ, ಅದು ಬೆಳವಣಿಗೆ ಹೊಂದಿ, ತನ್ನ ನಡೆ ನುಡಿಗಳಲ್ಲಿ ಐಕ್ಯವಾಗುತ್ತಾ ಪ್ರಕಟವಾದರೆ, ಅಂತಹ ವ್ಯಕ್ತಿಯನ್ನು ವಂಚಿಸಲು ಯಾರಿಂದಲೂ ಸಾಧ್ಯವಿಲ್ಲ. ಅದೊಂದು ಪರಿಪೂರ್ಣ ಸಾಮರ್ಥ್ಯ ಹೊರಬರುವ ನೈಜ್ಯ ಶಕ್ತಿ. ಯಾವುದೇ ಧರ್ಮ, ಜಾತಿ, ರಾಜಕೀಯ ಮತ್ತು ಆರ್ಥಿಕ ಶಕ್ತಿಗೆ ಅದನ್ನು ಅಲುಗಾಡಿಸುವುದು ಸುಲಭವಲ್ಲ. ಅಂತಹ ಸಾಂಸ್ಕೃತಿಕ ವ್ಯಕ್ತಿತ್ವವನ್ನು ಪ್ರತಿಯೊಬ್ಬ ದಲಿತರು ಪಡೆಯುವ ನಿಟ್ಟಿನಲ್ಲಿ ಕೆಲಸಗಳು ನಡೆದರೆ ಬಹುಶಃ ಬಾಬಾ ಸಾಹೇಬರ ಆಶಯದ ಸಮ ಸಮಾಜದ ಹತ್ತಿರಕ್ಕೆ ಶೀಘ್ರವೇ ಬರಬಹುದು.....

ಏಕೆಂದರೆ ಆಗ ಯಾವುದೇ ಬಲಾಢ್ಯ ಅಥವಾ ಮೇಲ್ಜಾತಿಯ ಸಮುದಾಯಗಳವರು ಈ ಸಾಂಸ್ಕೃತಿಕ ವ್ಯಕ್ತಿತ್ವದ ವ್ಯಕ್ತಿಯನ್ನು ಮತ್ತು ಆ ರೀತಿ ಬೆಳೆದ ಸಮುದಾಯಗಳನ್ನು ಶೋಷಿಸಲು ಸಾಧ್ಯವಾಗುವುದಿಲ್ಲ. ಇದೊಂದು ಸೂಕ್ಷ್ಮವಾದ ವಿಷಯ. ಏಕೆಂದರೆ ಶೋಷಕರು ಈ ಸಾಂಸ್ಕೃತಿಕ ವ್ಯಕ್ತಿತ್ವವನ್ನು ಹೊಂದಿಯೇ ಅದರ ಭಾಗವಾಗಿ ಮುಖವಾಡ ಹಾಕಿಕೊಂಡು ಶೋಷಣೆ ಮಾಡುವ ಧೈರ್ಯ ಮಾಡುತ್ತಾರೆ. ಅದಕ್ಕೆ ಎದುರಾಗಿ ಮತ್ತೊಂದು ಸಾಂಸ್ಕೃತಿಕ ವ್ಯಕ್ತಿತ್ವ ನಿಂತರೆ ಆಗ ಅವರು ಹಿನ್ನಡೆಗೆ ಸರಿಯಲೇಬೇಕಾಗುತ್ತದೆ.......

ಈಗ ದಲಿತೇತರರಿಂದ ಕೇಳಿ ಬರುತ್ತಿರುವ ಕೂಗು ಸಹ ಅದೇ ಆಗಿದೆ. ಆಳದಲ್ಲಿ ಅಸ್ಪೃಶ್ಯತೆಯ ನೋವಿಗೆ ಬಲವಾದ ಕಾರಣವಿದೆ ಮತ್ತು ಐತಿಹಾಸಿಕ ಹಿನ್ನೆಲೆಯಿದೆ. ಆದರೆ ಈಗಿನ ಜನ ಸಮುದಾಯದಲ್ಲಿ ದಲಿತರ ನೋವು ಇತರರಿಗೆ ಮೇಲ್ನೋಟಕ್ಕೆ ಕಾಣುತ್ತಿಲ್ಲ. ಎಲ್ಲಾ ಸೌಕರ್ಯಗಳನ್ನು ಪಡೆದ ಅವರು ನಮ್ಮೊಂದಿಗೆ ಏಕೆ ಸಮನಾಗಿ ಸ್ಪರ್ಧಿಸುತ್ತಿಲ್ಲ ಎಂದೇ ಪ್ರಶ್ನಿಸುತ್ತಾರೆ. ಅದು ನಿಜಕ್ಕೂ ಸಮಗ್ರ ಚಿಂತನೆಯ ಮನುಷ್ಯತ್‌ದ ಪ್ರಶ್ನೆಯಲ್ಲ ಎಂಬುದು ನಿಜ. ಆದರೆ ಅಷ್ಟು ಆಳಕ್ಕೆ ಹೋಗುವ ವಯಸ್ಸು ಮತ್ತು ಸಂವೇದನಾಶೀಲ ಮನಸ್ಸು ಈಗ ಇಲ್ಲದಿರುವುದರಿಂದ ಅವರ ಪ್ರಶ್ನೆಗಳಿಗೆ ನೇರ ಉತ್ತರ ನೀಡುವ ನಿಟ್ಟಿನಲ್ಲಿ ಒಂದಷ್ಟು ಮಾನಸಿಕ ಬದಲಾವಣೆ ಮಾಡಿಕೊಳ್ಳುವ ಅವಶ್ಯಕತೆ ಇದೆ......

ಏಕೆಂದರೆ ಶೋಷಣೆಯ ರೂಪಗಳು ಬದಲಾಗುತ್ತಿದೆ. ಅದು ಪರೋಕ್ಷವಾಗಿ, ಅಗೋಚರವಾಗಿ ಇತರ ಅನೇಕ ಸಮುದಾಯಗಳನ್ನು ಶೋಷಿಸುತ್ತಿದೆ. ಆ ಶೋಷಣೆಯಲ್ಲಿ ಇರುವವರಿಗೆ ಈ ಜಾತಿಯ ಶೋಷಣೆ ಅಷ್ಟಾಗಿ ಅರಿವಾಗುತ್ತಿಲ್ಲ. ಈ ಶೋಷಣೆಯ ರೂಪವೇ ಕಾರ್ಪೊರೇಟ್ ಸಂಸ್ಕೃತಿ. ಸಾಂಕೇತಿಕವಾಗಿ ಇದನ್ನು ಅಂಬಾನಿ – ಅದಾನಿ ಸಾಮ್ರಾಜ್ಯಗಳು ಎಂಬುದಾಗಿ ಕರೆಯಬಹುದು......

ಇಂತಹ ಸ್ಪರ್ಧಾತ್ಮಕ ಜಗತ್ತಿನಲ್ಲಿ, ಆರ್ಥಿಕ ಗುಲಾಮಿತನ ಸೃಷ್ಟಿಯಾಗಿರುವ ಸಂದರ್ಭದಲ್ಲಿ, ವೇಗ ಮತ್ತು ಅತಿಯಾದ ಪರಿಸರ ನಾಶದ ಅನಾರೋಗ್ಯಕಾರಿಪರಿಸ್ಥಿತಿಇರುವಸನ್ನಿವೇಶದಲ್ಲಿ, ಜಾತಿಯ ಅಸ್ಪೃಶ್ಯತೆ ದಲಿತರಲ್ಲದವರಿಗೆ ಹೆಚ್ಚು ಕಾಡುತ್ತಿಲ್ಲ. ಇದನ್ನು ದಲಿತ ಚಳುವಳಿಯ ವಕ್ತಾರಾರು ಅರ್ಥ ಮಾಡಿಕೊಳ್ಳಬೇಕಿದೆ.....

ಅರ್ನೆಸ್ಟ್ ಚೆಗುವಾರ ಅವರ ಮಾತುಗಳು ಇಲ್ಲಿ ನೆನಪಾಗಬೇಕಿದೆ.

" ಜಗತ್ತಿನ ಎಲ್ಲಾ ಶೋಷಿತರು ನನ್ನ ಸಂಗಾತಿಗಳು " ಅಂದರೆ ಜಾತಿ ಶೋಷಣೆಯೇ ಇರಲಿ, ಆರ್ಥಿಕ ಶೋಷಣೆಯೇ ಇರಲಿ, ನಿರುದ್ಯೋಗಿಗಳ ಶೋಷಣೆಯೇ ಇರಲಿ, ಭಾಷಾ ಹೇರಿಕೆಯೇ ಇರಲಿ ಎಲ್ಲವನ್ನು ಒಂದು ನೆಲೆಯಲ್ಲಿ, ಬಸವ ತತ್ವದ ಅಡಿಯಲ್ಲಿ ಹೋರಾಡುವ ಹೃದಯ ವೈಶಾಲ್ಯವನ್ನು ಬೆಳೆಸಿಕೊಳ್ಳಬೇಕಾಗಿದೆ. ದಲಿತರಲ್ಲದವರು ಸಹ ಮಾನವೀಯ ನೆಲೆಯಲ್ಲಿ ದಲಿತ ಚಳುವಳಿಯಲ್ಲಿ ಪಾಲ್ಗೊಳ್ಳಲು ಮುಕ್ತ ಮತ್ತು ಪ್ರೀತಿಯ ಅವಕಾಶ ಕೊಡಬೇಕಿದೆ. ಆಗ ಈ ಚಳುವಳಿಗೆ ಪರಿಣಾಮಕಾರಿ ಮತ್ತು ದೈತ್ಯ ಶಕ್ತಿ ದೊರೆಯುತ್ತದೆ.......

ಹೌದು, ಈ ನಡೆಯೂ ಒಂದು ರೀತಿಯ ಅಪಾಯಕಾರಿ ಮತ್ತು ದಲಿತ ಚಳುವಳಿಯ ನಿಜವಾದ ಆಶಯವನ್ನು ದಾರಿ ತಪ್ಪಿಸಬಹುದಾದ ಸಾಧ್ಯತೆಯೂ ಇರುತ್ತದೆ. ಏಕೆಂದರೆ ಈ ವಿಕೃತ ಜನರಿರುವ ಮನಸ್ಥಿತಿಯ ಸಂದರ್ಭದಲ್ಲಿ, ಕೆಲವು ಏಜೆಂಟ್ ಗಳು ಆ ಕೆಲಸವನ್ನು ಮಾಡುತ್ತಾರೆ. ಆದರೆ ಅನಿವಾರ್ಯವಾಗಿ ಅದನ್ನು ಎದುರಿಸಲೇಬೇಕಾಗುತ್ತದೆ. ಗುಪ್ತವಾಗಿ ಅಥವಾ ಮುಚ್ಚಿದ ಸನ್ನಿವೇಶದಲ್ಲಿ ಬದುಕುವುದು ಸಾಧ್ಯವಿಲ್ಲ. ಒಂದು ಕಡೆ ಮೇಲ್ವರ್ಗದವರ ದೌರ್ಜನ್ಯಗಳನ್ನು ಖಂಡಿಸುತ್ತಾ, ಇನ್ನೊಂದು ಕಡೆ ಅಸ್ಪೃಶ್ಯ ಸಮುದಾಯದ ಯುವಶಕ್ತಿಯನ್ನು, ಮಹಿಳಾ ಶಕ್ತಿಯನ್ನು ಸ್ಪರ್ಧೆಗೆ ಅಣಿ ಮಾಡಬೇಕಾದ, ಸಾಮರ್ಥ್ಯ ವೃದ್ಧಿಸಬೇಕಾದ, ಆರ್ಥಿಕ, ಸಾಮಾಜಿಕ, ಔದ್ಯೋಗಿಕ ಕ್ಷೇತ್ರಗಳಲ್ಲಿ ಅವರ ಪಾಲ್ಗೊಳ್ಳುವಿಕೆ ಹೆಚ್ಚು ಮಾಡಬೇಕಾದ ಅವಶ್ಯಕತೆಯೂ ಇದೆ....

ಇಲ್ಲದಿದ್ದರೆ ಎಲ್ಲಾ ಸಮುದಾಯಗಳಂತೆ ಕೇವಲ ನಾಯಕರುಗಳು ಮತ್ತು ಅವರ ಹಿಂಬಾಲಕರು ಮಾತ್ರ ಉತ್ತಮ ಅಧಿಕಾರ ಸ್ಥಾನಮಾನ ಪಡೆದು ಎಂದಿನಂತೆ ಇತರರೆಲ್ಲರೂ ಅಸಹಾಯಕ ಪರಿಸ್ಥಿತಿಯಲ್ಲಿ ಜೀವನ ಮಾಡಬೇಕಾಗುತ್ತದೆ......

ಐವತ್ತು ವರ್ಷಗಳಿಂದ ಬೆಳೆದು ಬಂದಿರುವ ದಲಿತ ಚಳುವಳಿ ಕನ್ನಡದ ಇತಿಹಾಸದ ಮಟ್ಟಿಗೆ ಒಂದು ಅತ್ಯದ್ಭುತ ಸಂಘಟನೆ. ನಿಜಕ್ಕೂ ಈಗ ನೂರು ವರ್ಷಗಳ ಇತಿಹಾಸವಿರುವ

ಆರ್ ಎಸ್ ಎಸ್ ಸಂಘಟನೆಗೆಯಾವುದಾದರೂ ಒಂದು ಪರ್ಯಾಯ ಶಕ್ತಿ ಇರುವ ಸಂಘಟನೆ ಇದೆ ಎಂದಾದಲ್ಲಿ ಅದು ನಿಸ್ಸಂದೇಹವಾಗಿ ರೈತ ಮತ್ತು ದಲಿತ ಸಂಘಟನೆಯೇ ಆಗಿದೆ........

ಆದ್ದರಿಂದ ಅದನ್ನು ಸಮಗ್ರವಾಗಿ ಪರಿಶೀಲಿಸಿ ಮುನ್ನಡೆಸಬೇಕಾದ ಜವಾಬ್ದಾರಿಯನ್ನು ಎಲ್ಲಾ ದಲಿತ ಮುಖಂಡರು ತೆಗೆದುಕೊಳ್ಳಬೇಕಾಗಿದೆ. ತಮ್ಮ ನಡುವಿನ ಭಿನ್ನಾಭಿಪ್ರಾಯ, ವೈಮನಸ್ಯಗಳನ್ನು ಮರೆತು, ಸಾಧ್ಯವಾದಷ್ಟು ರಾಜಕೀಯ ಒಗ್ಗಟ್ಟನ್ನು ಪ್ರದರ್ಶಿಸಬೇಕಿದೆ. ಸಾಂಸ್ಕೃತಿಕವಾಗಿ ದಲಿತ ಚಳುವಳಿಯ ವ್ಯಕ್ತಿತ್ವಗಳನ್ನು ರೂಪಿಸಬೇಕಾಗಿದೆ......

ಆಗ ಮಾತ್ರ ಮುಂದಿನ ತಲೆಮಾರಿಗೆ ಈ ಚಳುವಳಿ ಮುನ್ನಡೆಯುತ್ತದೆ. ಇಲ್ಲದಿದ್ದರೆ ಕಾರ್ಪೊರೇಟ್ ಸಂಸ್ಕೃತಿ ಎಲ್ಲವನ್ನು ಆಪೋಷನ ತೆಗೆದುಕೊಳ್ಳಬಹುದು......

ಇದು ಕೇವಲ ಒಂದು ಸಣ್ಣ ಅನಿಸಿಕೆ ಅಷ್ಟೇ. ಈ ಚಳುವಳಿಯ ಆಳ, ಅಗಲ, ವಿಸ್ತಾರ ಅತ್ಯಂತ ವಿಸ್ತೃತವಾಗಿದೆ. ಅದು ಉಂಟು ಮಾಡಿದ ತವಕ ತಲ್ಲಣಗಳು, ಪರಿಣಾಮಗಳು ಸಾಕಷ್ಟು ಇದೆ. ಅದನ್ನು ಧೀರ್ಘವಾಗಿ ಅವಲೋಕನ ಮಾಡಿಕೊಳ್ಳಬೇಕು. ಇದು ಕೇವಲ ಈ ಕ್ಷಣದ ಸರಳ ಸಂಕ್ಷಿಪ್ತ ವಿವರಣೆ ಮಾತ್ರ. ಸಲಹೆಗಳು, ಪರಿಹಾರಗಳು ಇನ್ನೂ ವಿಮರ್ಶೆಗೆ ಒಳಪಡಿಸಬೇಕಾಗಿದೆ.......ಇಷ್ಟು ದೀರ್ಘಕಾಲ ದಲಿತ ಚಳವಳಿಯ ಕಾವು ಉಳಿಸಿಕೊಂಡಿರುವ ಎಲ್ಲರಿಗೂ ಮನದಾಳದ ಕೃತಜ್ಞತೆಗಳು........ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ, ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ, ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ, ಮನಸ್ಸುಗಳ ಅಂತರಂಗದ ಚಳವಳಿ,

» ವಿವೇಕಾನಂದ. ಎಚ್. ಕೆ.
9844013068............

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T